ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 82 Friday **18-09-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 82 ಶುಕ್ರವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಳೆ–ಬೆಳೆಯ ಆಶಾಕಿರಣ ಜೋಕುಮಾರ ಸ್ವಾಮಿ

ಗಣೇಶನ ನಂತರ ಜನಪದದ ಅಂಗಳಕ್ಕೆ ಬರುವ ಜೋಕುಮಾರ; ಏಳು ದಿನಗಳ ಮನೆಮನೆ ಸಂಚಾರದ ಹಿಂದೆ ಕೃಷಿ ಬದುಕಿನ ನಂಟು

“ಮುಂಜಾನೆಯ ಮೆರಗು”

ಜಗಳೂರು ಸೆ, 17– ಉತ್ತರ ಕರ್ನಾಟಕದ ಮಣ್ಣಿನ ಬದುಕು, ಕೃಷಿ ಸಂಸ್ಕೃತಿ, ಮಳೆ–ಬೆಳೆಯ ನಿರೀಕ್ಷೆ ಹಾಗೂ ಜನಪದ ನಂಬಿಕೆಗಳೊಂದಿಗೆ ಅವಿನಾಭಾವ ಸಂಬಂಧ ಹೊಂದಿರುವ ಆಚರಣೆಗಳಲ್ಲಿ ಜೋಕುಮಾರ ಸ್ವಾಮಿ ಹಬ್ಬವೂ ಒಂದು. ಗಣೇಶ ಚತುರ್ಥಿಯ ಬಳಿಕ ಗ್ರಾಮೀಣ ಪ್ರದೇಶಗಳಲ್ಲಿ ಕೇಳಿಬರುವ ಜೋಕುಮಾರನ ಹಾಡುಗಳು, ಬಿದಿರಿನ ಬುಟ್ಟಿಯಲ್ಲಿ ಹೊತ್ತು ತರುವ ಮಣ್ಣಿನ ಮೂರ್ತಿ, ಮನೆಮನೆಗೆ ನಡೆಯುವ ಪೂಜೆ ಹಾಗೂ ಹೊಲದಲ್ಲಿ ಚೆಲ್ಲುವ ಪ್ರಸಾದ ಈ ಹಬ್ಬದ ವಿಶೇಷತೆಗಳಾಗಿವೆ.

ಜನಪದರು ಜೋಕುಮಾರ ಸ್ವಾಮಿಯನ್ನು ಮಳೆ, ಬೆಳೆ, ಸಂತಾನ ಮತ್ತು ಸಮೃದ್ಧಿಯ ಸಂಕೇತವಾಗಿ ಕಾಣುತ್ತಾ–ರೆ. ಪ್ರದೇಶಾನುಸಾರ ಆಚರಣೆಗಳಲ್ಲಿ ವ್ಯತ್ಯಾಸವಿದ್ದರೂ, ಅದರ ಮೂಲ ಆಶಯ ಕೃಷಿ ಬದುಕಿನೊಂದಿಗೆ ಗಾಢವಾಗಿ ಬೆಸೆದುಕೊಂಡಿದೆ.

ಗಣೇಶನ ಬಳಿಕ ಜೋಕುಮಾರನ ಆಗಮನ

ಭಾದ್ರಪದ ಮಾಸದಲ್ಲಿ ಗಣೇಶ ಚತುರ್ಥಿಯ ನಂತರ ಜೋಕುಮಾರ ಸ್ವಾಮಿಯ ಆರಾಧನೆ ಆರಂಭವಾಗುತ್ತದೆ ಎಂಬುದು ಜನಪದ ನಂಬಿಕೆ. ಕೆಲವು ಕಡೆ ಭಾದ್ರಪದ ಅಷ್ಟಮಿಯಂದು ಜೋಕುಮಾರ ಹುಟ್ಟುತ್ತಾನೆ ಎಂದರೆ, ಇನ್ನೂ ಕೆಲವು ಪ್ರದೇಶಗಳಲ್ಲಿ ಅನಂತನ ಹುಣ್ಣಿಮೆಯ ಸುತ್ತಮುತ್ತ ಹಬ್ಬ ನಡೆಯುತ್ತದೆ. ಉತ್ತರ ಕರ್ನಾಟಕದಲ್ಲಿ “ಗಣೇಶ ಹೋದ, ಜೋಕುಮಾರ ಬಂದ” ಎಂಬ ಮಾತು ಈ ಆಚರಣೆಯ ಕಾಲಮಾನವನ್ನು ಸೂಚಿಸುತ್ತದೆ.

ಜನಪದ ಕಥನಗಳಲ್ಲಿ ಜೋಕುಮಾರನನ್ನು ಶಿವನ ಪುತ್ರ ಕುಮಾರಸ್ವಾಮಿಯೊಂದಿಗೆ ಗುರುತಿಸಲಾಗುತ್ತದೆ. ಗಣೇಶನು ಕೈಲಾಸಕ್ಕೆ



ಮೊಬೈಲ್, ನಗರೀಕರಣ ಮತ್ತು ಬದಲಾಗುತ್ತಿರುವ ಜೀವನಶೈಲಿಯ ನಡುವೆಯೂ ಉತ್ತರ ಕರ್ನಾಟಕದ ಹಲವು ಗ್ರಾಮಗಳಲ್ಲಿ ಈ ಹಬ್ಬ ಇನ್ನೂ ಜೀವಂತವಾಗಿದೆ. ಆದರೆ ಹಿಂದಿನಂತೆ ಎಲ್ಲೆಡೆ ಮನೆಮನೆ ಸಂಚಾರ ಮತ್ತು ಜನಪದ ಹಾಡುಗಳು ಕಾಣಿಸಿಕೊಳ್ಳುತ್ತಿಲ್ಲ. ಆದ್ದರಿಂದ ಇದನ್ನು ಧಾರ್ಮಿಕ ಕಾರ್ಯಕ್ರಮವಷ್ಟೇ ಅಲ್ಲದೆ ಜನಪದ ಪರಂಪರೆ, ಭಾಷೆ, ಹಾಡು ಮತ್ತು ಕೃಷಿ ಸಂಸ್ಕೃತಿಯ ದಾಖಲೆಯಾಗಿ ಸಂರಕ್ಷಿಸುವ ಅಗತ್ಯವಿದೆ.

ಎರ್ರಿಸ್ವಾಮಿ , ಸಾಹಿತಿ

ಮರಳಿದ ಬಳಿಕ ಭೂಲೋಕದ ಮಳೆ–ಬೆಳೆ ಪರಿಸ್ಥಿತಿ, ರೈತರ ಸಂಕಷ್ಟ ಮತ್ತು ಜನರ ಬದುಕಿನ ವಿಚಾರ ತಿಳಿಸಲು ಜೋಕುಮಾರ ಬರುತ್ತಾನೆ ಎಂಬ ನಂಬಿಕೆಯಿದೆ. ಹೀಗಾಗಿ ಅವನ ಮನೆಮನೆ ಸಂಚಾರವು ಕೇವಲ ಧಾರ್ಮಿಕ ಆಚರಣೆಯಲ್ಲ; ಜನರ ಬದುಕನ್ನು ಗಮನಿಸುವ ಸಂಕೇತವೂ ಆಗಿದೆ.

ಮಣ್ಣಿನ ಮೂರ್ತಿ ಮತ್ತು ಮನೆಮನೆ ಸಂಚಾರ

ಮಣ್ಣು, ಎಣ್ಣೆ ಸೇರಿದಂತೆ ಸ್ಥಳೀಯವಾಗಿ ದೊರೆಯುವ ವಸ್ತುಗಳಿಂದ ಜೋಕುಮಾರನ ಮೂರ್ತಿ ತಯಾರಿಸಲಾಗುತ್ತದೆ. ಅದನ್ನು ಬಿದಿರಿನ ಬುಟ್ಟಿಯಲ್ಲಿ ಪ್ರತಿಷ್ಠಾಪಿಸಿ ಬೇವಿನ ಎಲೆ, ಹೂವುಗಳಿಂದ ಅಲಂಕರಿಸಲಾಗುತ್ತದೆ. ಕೆಲವು ಕಡೆ ಕುಂಬಾರ ಸಮುದಾಯದವರು ಮೂರ್ತಿ ತಯಾರಿಸಿದರೆ, ಗಂಗಾಮತಸ್ಥ, ಅಂಬಿಗ, ತಳವಾರ, ಬಾರಿಕ ಸೇರಿದಂತೆ ವಿವಿಧ ಸಮುದಾಯಗಳ ಮಹಿಳೆಯರು ಅದನ್ನು ಮನೆಮನೆಗೆ ಕೊಂಡೊಯ್ಯುತ್ತಾರೆ.

ಮಹಿಳೆಯರು ಬುಟ್ಟಿಯಲ್ಲಿ ಜೋಕುಮಾರನನ್ನು ಹೊತ್ತು ಮನೆಗಳ ಮುಂದೆ ಪೂಜೆ ಸಲ್ಲಿಸಿ ಜನಪದ ಹಾಡುಗಳನ್ನು ಹಾಡುತ್ತಾರೆ. “ಅಡ್ಡಡ್ಡ ಮಳೆ ಬಂದು, ದೊಡ್ಡ ದೊಡ್ಡ ಕೆರೆ ತುಂಬಿ...” ಎಂಬ ಹಾಡುಗಳಲ್ಲಿ ಮಳೆ ಬರಲಿ, ಕೆರೆ–ಕಟ್ಟೆಗಳು ತುಂಬಲಿ, ಜಾನುವಾರುಗಳಿಗೆ ಮೇವು ದೊರೆಯಲಿ, ರೈತರ ಬದುಕು ಹಸನಾಗಲಿ ಎಂಬ ಆಶಯ ವ್ಯಕ್ತವಾಗುತ್ತದೆ.

ಬೆಣ್ಣೆ, ಸಂತಾನ ಮತ್ತು ಸಮೃದ್ಧಿಯ ನಂಬಿಕೆ

ಜೋಕುಮಾರನ ಮೂರ್ತಿಯ ಬಾಯಿಗೆ ಬೆಣ್ಣೆ ಹಚ್ಚುವುದು ಹಲವು ಪ್ರದೇಶಗಳ ಪ್ರಮುಖ ಆಚರಣೆ. ಮಕ್ಕಳಾಗದ ಮಹಿಳೆಯರು ಬೆಣ್ಣೆ ಹಚ್ಚಿ ಪ್ರಾರ್ಥಿಸಿದರೆ ಸಂತಾನ ಭಾಗ್ಯ ದೊರೆಯುತ್ತದೆ ಎಂಬ ನಂಬಿಕೆಯಿದೆ. ಇದು ವೈಜ್ಞಾನಿಕವಾಗಿ ಸಾಬೀತಾದ ಸಂಗತಿಯಲ್ಲದಿದ್ದರೂ, ಸಂತಾನ, ಫಲವತ್ತತೆ ಮತ್ತು ಸಮೃದ್ಧಿಯ ಸಂಕೇತವಾಗಿ ಜೋಕುಮಾರನನ್ನು ಕಾಣುವ ಜನಪದ ಮನೋಭಾವವನ್ನು ಪ್ರತಿಬಿಂಬಿಸುತ್ತದೆ.

ರೈತರ ಪಾಲಿಗೆ ಮಳೆಯ ದೇವರು

ಜೋಕುಮಾರ ಹಬ್ಬದ ಕೇಂದ್ರಬಿಂದು ಕೃಷಿ. ಮಳೆಗಾಲದ ನಿರ್ಣಾಯಕ ಹಂತದಲ್ಲಿ ನಡೆಯುವ ಈ ಆಚರಣೆಯಲ್ಲಿ ರೈತರು ಉತ್ತಮ ಮಳೆ, ಸಮೃದ್ಧ ಬೆಳೆ ಮತ್ತು ಜಾನುವಾರುಗಳ ಕ್ಷೇಮಕ್ಕಾಗಿ ಪ್ರಾರ್ಥಿಸುತ್ತಾರೆ. ಆದ್ದರಿಂದ ಜೋಕುಮಾರನನ್ನು ಕೆಲವೆಡೆ “ಮಳೆ ತರುವ ದೇವರು” ಹಾಗೂ “ಮಣ್ಣಿನ ಮಕ್ಕಳ ದೈವ” ಎಂದು ಕರೆಯುತ್ತಾರೆ.

ಪೂಜೆಯ ಸಂದರ್ಭದಲ್ಲಿ ಮನೆಗಳಿಂದ ಅಕ್ಕಿ, ಜೋಳ, ಕಾಳು–ಧಾನ್ಯ ಸೇರಿದಂತೆ ವಿವಿಧ ವಸ್ತುಗಳನ್ನು ನೀಡಲಾಗುತ್ತದೆ. ಕೆಲವು ಪ್ರದೇಶಗಳಲ್ಲಿ ದೊರೆಯುವ ಚರಗ ಅಥವಾ ಪ್ರಸಾದವನ್ನು ರೈತರು ಹೊಲಕ್ಕೆ ಕೊಂಡೊಯ್ದು ಚೆಲ್ಲುತ್ತಾರೆ. ಇದ–ರಿಂದ ಉತ್ತಮ ಫಸಲು ಬರುತ್ತದೆ ಎಂಬ ನಂಬಿಕೆಯಿದೆ. ಈ ಆಚರಣೆಯ ಹಿಂದೆ ಮಣ್ಣು ಮತ್ತು ಕೃಷಿಯೊಂದಿಗೆ ಮನುಷ್ಯನ ಆಧ್ಯಾತ್ಮಿಕ ಸಂಬಂಧ ವ್ಯಕ್ತವಾಗುತ್ತದೆ.

ಏಳು ದಿನಗಳ ಪಯಣ ಮತ್ತು ಅಂತ್ಯ

ಹಲವು ಪ್ರದೇಶಗಳಲ್ಲಿ ಜೋಕುಮಾರನನ್ನು ಸುಮಾರು ಏಳು ದಿನಗಳ ಕಾಲ ಮನೆಮನೆಗೆ ಕೊಂಡೊಯ್ಯಲಾಗುತ್ತದೆ. ಈ ಅವಧಿಯಲ್ಲಿ ಅವನ ಹುಟ್ಟು, ಜೀವನ ಮತ್ತು ಸಂದೇಶವನ್ನು ಹಾಡುಗಳ ಮೂಲಕ



ಜೋಕುಮಾರ ಸ್ವಾಮಿ ಹಬ್ಬವು ಮಣ್ಣು, ಮಳೆ, ಕೃಷಿ, ಮಹಿಳೆಯರು ಮತ್ತು ಗ್ರಾಮೀಣ ಬದುಕನ್ನು ಒಂದೇ ದಾರದಲ್ಲಿ ಬೆಸೆಯುವ ಸಾಂಸ್ಕೃತಿಕ ಸೇತುವೆ. ಮಳೆಯ ನಿರೀಕ್ಷೆಯಲ್ಲಿದ್ದ ರೈತನ ಮನಸ್ಸಿನಲ್ಲಿ ಜೋಕುಮಾರ ಆಶೆಯ ಸಂಕೇತವಾಗಿದ್ದ. ಹೀಗಾಗಿ ಈ ಹಬ್ಬವನ್ನು ಕೇವಲ ಜನಪದ ಆಚರಣೆಯಾಗಿ ಅಲ್ಲ, ಕನ್ನಡ ನಾಡಿನ ಕೃಷಿ ಸಂಸ್ಕೃತಿಯ ಜೀವಂತ ನೆನಪಾಗಿ ನೋಡುವ ಅಗತ್ಯವಿದೆ.

ಕಮಲ ಓಬಯ್ಯನವರು.

ಹೇಳಲಾಗುತ್ತದೆ. ಈ ಹಾಡುಗಳಲ್ಲಿ ಭಕ್ತಿ ಮಾತ್ರವಲ್ಲದೆ ಗ್ರಾಮೀಣ ಬದುಕು, ಕೃಷಿ, ಸಂಬಂಧಗಳು ಮತ್ತು ಜನರ ಆಶೋತ್ತರಗಳೂ ವ್ಯಕ್ತವಾಗುತ್ತವೆ.

ಹಬ್ಬದ ಕೊನೆಯ ದಿನ ಮೂರ್ತಿಯನ್ನು ನಿರ್ದಿಷ್ಟ ಸ್ಥಳಕ್ಕೆ ಕೊಂಡೊಯ್ದು ವಿಸರ್ಜನೆ ಅಥವಾ ಸಮಾಧಿ ಮಾಡುವ ಪದ್ಧತಿಯಿದೆ. ಹೀಗಾಗಿ ಹುಟ್ಟು, ಮನೆಮನೆ ಸಂಚಾರ, ಪೂಜೆ, ಮಳೆ–ಬೆಳೆ ಪ್ರಾರ್ಥನೆ ಮತ್ತು ಅಂತ್ಯ ಎಂಬ ಜನಪದ ಚಕ್ರವೇ ಈ ಹಬ್ಬದ ವಿಶೇಷತೆ.

ಮಹಿಳೆಯರ ಪಾತ್ರ ಮತ್ತು ಪರಂಪರೆಯ ಉಳಿವು

ಜೋಕುಮಾರ ಹಬ್ಬದಲ್ಲಿ ಮಹಿಳೆಯರ ಪಾತ್ರ ಅತ್ಯಂತ ಪ್ರಮುಖ. ಮೂರ್ತಿಯನ್ನು ಹೊತ್ತುಕೊಂಡು ಹೋಗುವುದು, ಹಾಡುಗಳನ್ನು ಹಾಡುವುದು, ಪೂಜೆ ಸಲ್ಲಿಸುವುದು ಮತ್ತು ಪ್ರಸಾದ ಸ್ವೀಕರಿಸುವ ಮೂಲಕ ಅವರು ಆಚರಣೆಯ ಜೀವಾಳವಾಗಿದ್ದಾರೆ. ಈ ಮೂಲಕ ಜನಪದ ಹಾಡುಗಳು, ಆಚರಣೆಗಳು ಮತ್ತು ಸಂಪ್ರದಾಯಗಳು ತಲೆಮಾರಿನಿಂದ ತಲೆಮಾರಿಗೆ ಸಾಗುತ್ತಿವೆ.

ಜನನ, ಮರಣ, ಸಂಸ್ಕಾರ :

ಗಂಗ ಮಥಸ್ಥರ ಕುಟುಂಬದಲ್ಲಿ ಜನಿಸಿ ಮಾದಿಗ ಸಮುದಾಯದವರ ಮನೆಯಲ್ಲಿ ಸಾವಿಗೀಡಾಗುತ್ತಾನೆ, ಅಗಸನ ಮನೆಯಲ್ಲಿ ಅಂತ್ಯ ಸಂಸ್ಕಾರವನ್ನು ಹಾಗೂ ದಿವಸ ಕಾರ್ಯಗಳನ್ನು ಮಾಡಲಾಗುತ್ತದೆ ಎಂಬ ಪ್ರತೀತಿ ನಡೆದುಕೊಂಡು ಬರುತ್ತಿದೆ. ಪ್ರತಿ ವರ್ಷ 7 ದಿನಗಳ ಆಚರಣೆಯಾಗುತ್ತಿತ್ತು, ಈ ಭಾರಿ 9 ದಿನ ನಡೆಯುತ್ತಿದೆ ಎನ್ನುತ್ತಾರೆ ಜಗದೀಶ್.

ಎರಡು ಕೋಟಿ ಉದ್ಯೋಗ' ಭರವಸೆ ಎಲ್ಲಿದೆ? ಮೋದಿ ಜನ್ಮದಿನದಂದು ಯುವ ಕಾಂಗ್ರೆಸ್ ಆಕ್ರೋಶ



“ಮುಂಜಾನೆಯ ಮೆರಗು”

ಜಗಳೂರು, ಸೆ.17– ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಜಗಳೂರು ಪಟ್ಟಣದಲ್ಲಿ ಯುವ ಕಾಂಗ್ರೆಸ್ ಕಾರ್ಯಕರ್ತರು 'ರಾಷ್ಟ್ರೀಯ ನಿರುದ್ಯೋಗ ದಿನ' ಆಚರಿಸಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಮಹಾತ್ಮಗಾಂಧಿ ವೃತ್ತದಲ್ಲಿ ಬುಧವಾರ ಸಂಜೆ ಜಮಾಯಿಸಿದ ಯುವ ಕಾಂಗ್ರೆಸ್ ಕಾರ್ಯಕರ್ತರು ಮೇಣದಬತ್ತಿ ಹಚ್ಚಿ, ಘೋಷಣೆಗಳನ್ನು ಕೂಗುವ ಮೂಲಕ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ದೇಶದಲ್ಲಿ ಯುವಕರಿಗೆ ಉದ್ಯೋಗಾವಕಾಶಗಳು ಸಮರ್ಪಕವಾಗಿ ದೊರೆಯುತ್ತಿಲ್ಲ ಎಂದು ಆರೋಪಿಸಿದ ಅವರು, ನಿರುದ್ಯೋಗ ಸಮಸ್ಯೆಗೆ ಕೇಂದ್ರ ಸರ್ಕಾರ ಸೂಕ್ತ ಪರಿಹಾರ ಕಂಡುಕೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಯುವ ಕಾಂಗ್ರೆಸ್ ಉಪಾಧ್ಯಕ್ಷ ರಮೇಶ್ ಸರ್ಕಾರ್ ಮಾತನಾಡಿ, ದೇಶದಲ್ಲಿ ನಿರುದ್ಯೋಗಿ ಯುವಕರ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ನೀಡಿದ್ದ ಭರವಸೆ ಈಡೇರಿಲ್ಲ ಎಂದು ಆರೋಪಿಸಿದರು.

ಪದವಿ ಹಾಗೂ ವಿವಿಧ ವೃತ್ತಿಪರ ಶಿಕ್ಷಣ ಪಡೆದಿರುವ, ಕೌಶಲ್ಯ ಹೊಂದಿರುವ ಹೆಚ್ಚಿನ ಸಂಖ್ಯೆಯ ಯುವಕರು ಉದ್ಯೋಗಕ್ಕಾಗಿ ಎದುರು ನೋಡುತ್ತಿದ್ದಾ–ರೆ. ಆದರೆ ಯುವಕರಿಗೆ ಸಮರ್ಪಕ ಉದ್ಯೋಗಾವಕಾಶ ಕಲ್ಪಿಸುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ ಎಂದು ಅವರು ದೂರಿದರು.

ದೇಶದ ಜ್ವಲಂತ ಸಮಸ್ಯೆಗಳಾದ ನಿರುದ್ಯೋಗ, ಉದ್ಯೋಗ ಸೃಷ್ಟಿ ಸೇರಿದಂತೆ ಯುವ ಸಮುದಾಯಕ್ಕೆ ಸಂಬಂಧಿಸಿದ ವಿಚಾರಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಆದರೆ ಬಿಜೆಪಿ ಸರ್ಕಾರ ಜನರ ಗಮನವನ್ನು ಬೇರೆಡೆ ಸೆಳೆಯುವ ರಾಜಕಾರಣದಲ್ಲಿ ತೊಡಗಿದೆ ಎಂದು ರಮೇಶ್ ಸರ್ಕಾರ್ ಆರೋಪಿಸಿದರು. ಯುವಜನರ ಹಿತಾಸಕ್ತಿಗೆ ಪೂರಕವಾದ ಉದ್ಯೋಗ ನೀತಿಗಳನ್ನು ರೂಪಿಸಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಮೂಲಕ ನಿರುದ್ಯೋಗ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿಧಾನಸಭಾ ಕ್ಷೇತ್ರ ಯುವ ಕಾಂಗ್ರೆಸ್ ಉಪಾಧ್ಯಕ್ಷ ಅಕ್ಷಯ್, ಜಗಳೂರು ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಗುರುಮೂರ್ತಿ ಎಚ್., ಪದಾಧಿಕಾರಿಗಳಾದ ದಯಾನಂದ, ಅನಂತಕುಮಾರ್, ಶಾಂತಕುಮಾರ್ ಸೇರಿದಂತೆ ಯುವ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸಿದ್ದರು.

ಜಗಳೂರು ಬರಪೀಡಿತ ತಾಲೂಕು ಆಗುವುದು ಖಚಿತ: ರೈತರು ಆತಂಕಪಡಬೇಡಿ

ಯಾವ ಹಂತದಲ್ಲಿ ಸೇರ್ಪಡೆಯಾದರೂ ಸಮಾನ ಬರಪರಿಹಾರ: ಶಾಸಕ ಬಿ.ದೇವೇಂದ್ರಪ್ಪ

“ಮುಂಜಾನೆಯ ಮೆರಗು”

ಜಗಳೂರು, ಸೆ.17– ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಮೂರನೇ ಹಂತದಲ್ಲಾದರೂ ಸೇರ್ಪಡೆಗೊಳಿಸುವುದು ಖಚಿತವಾಗಿದ್ದು, ಯಾವ ಹಂತದಲ್ಲಿ ಸೇರ್ಪಡೆಗೊಂಡರೂ ರೈತರಿಗೆ ಸಮಾನವಾಗಿ ಬರಪರಿಹಾರ ದೊರೆಯಲಿದೆ. ಹೀಗಾಗಿ ರೈತರು ಯಾವುದೇ ಆತಂಕಕ್ಕೆ ಒಳಗಾಗಬಾರದು ಎಂದು ಶಾಸಕ ಬಿ. ದೇವೇಂದ್ರಪ್ಪ ಪತ್ರಿಕಾ ಹೇಳಿಕೆ ಮೂಲಕ ತಿಳಿಸಿದ್ದಾರೆ.

ಬರಪೀಡಿತ ಪಟ್ಟಿಯಿಂದ ಜಗಳೂರು ತಾಲೂಕು ಎರಡನೇ ಬಾರಿಯೂ ಕೈತಪ್ಪಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿದ ಅವರು, ಶುಕ್ರವಾರ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಹಾಗೂ ಕೃಷಿ ಮತ್ತು ಕಂದಾಯ ಸಚಿವರನ್ನು ಭೇಟಿಯಾಗಿ ಜಗಳೂರು ತಾಲೂಕನ್ನು ಮೂರನೇ ಬರಪಟ್ಟಿಗೆ ಸೇರ್ಪಡೆಗೊಳಿಸುವಂತೆ ಮನವಿ ಮಾಡಲಾಗುವುದು ಎಂದರು.

ಮುಖ್ಯಮಂತ್ರಿ ಅವರ ಸ್ವಕ್ಷೇತ್ರ ಕನಕಪುರ ತಾಲೂಕು ಕೂಡ ಬರಪೀಡಿತ ಪಟ್ಟಿಗೆ ಸೇರ್ಪಡೆಯಾಗದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಅವರೊಂದಿಗೆ ದೂರವಾಣಿ ಮೂಲಕ ಚರ್ಚಿಸಲಾಗಿದೆ. ಈ ವೇಳೆ ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸುವ ಕುರಿತು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ್ದಾರೆ ಎಂದು ದೇವೇಂದ್ರಪ್ಪ ತಿಳಿಸಿದರು.

ಜಗಳೂರು ತಾಲೂಕನ್ನು ಬರಪೀಡಿತ



ಪಟ್ಟಿಗೆ ಸೇರ್ಪಡೆಗೊಳಿಸುವುದು ಖಚಿತವಾಗಿದೆ. ಆಡಳಿತಾತ್ಮಕ ಕಾರಣಗಳಿಂದ ವಿಳಂಬವಾಗಬಹುದು. ಆದರೆ ಮೊದಲ, ಎರಡನೇ ಅಥವಾ ಮೂರನೇ ಹಂತ–ಯಾವ ಹಂತದಲ್ಲಿ ತಾಲೂಕು ಸೇರ್ಪಡೆಯಾದರೂ ಅರ್ಹ ರೈತರಿಗೆ ದೊರೆಯುವ ಬರಪರಿಹಾರದಲ್ಲಿ ಯಾವುದೇ ವ್ಯತ್ಯಾಸವಾಗುವುದಿಲ್ಲ ಎಂದು ಅವರು ಹೇಳಿದರು.

ತಾಲೂಕಿನ ರೈತರಲ್ಲಿ ಬರಪೀಡಿತ ಘೋಷಣೆ ಕುರಿತು ಗೊಂದಲ ಹಾಗೂ ಆತಂಕ ಬೇಡ. ರೈತರ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ಮೂಲಕ ಅಗತ್ಯ ಪರಿಹಾರ ದೊರಕಿಸಿಕೊಡಲು ಪ್ರಾಮಾಣಿಕವಾಗಿ ಪ್ರಯತ್ನಿಸಲಾಗುವುದು. ತಾಲೂಕಿನ ರೈತರ ಪರವಾಗಿ ಸದಾ ಧ್ವನಿಯಾಗಿರುತ್ತೇನೆ ಎಂದು ಶಾಸಕ ಬಿ. ದೇವೇಂದ್ರಪ್ಪ ಪತ್ರಿಕೆಯೊಂದಿಗೆ ಸ್ಪಷ್ಟಪಡಿಸಿದರು.

ಮಳೆ ಕೈಕೊಟ್ಟರೂ ಗ್ರಾಮೀಣ ಕೂಲಿಕಾರ್ಮಿಕರಿಗೆ ವಿಬಿಜಿ–ರಾಮ್‌ಜಿ ಆಸರೆ

ಜಗಳೂರು ತಾಲೂಕಿನ 22 ಗ್ರಾಪಂಗಳಲ್ಲಿ 1,800ಕ್ಕೂ ಅಧಿಕ ಕಾರ್ಮಿಕರಿಗೆ ಕೆಲಸ

“ಮುಂಜಾನೆಯ ಮೆರಗು”

ಜಗಳೂರು, ಸೆ.17– ತಾಲೂಕಿನಲ್ಲಿ ಮಳೆ ಸಂಪೂರ್ಣವಾಗಿ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಕೃಷಿ ಚಟುವಟಿಕೆಗಳು ಕುಂಠಿತಗೊಂಡಿದ್ದು, ಗ್ರಾಮೀಣ ಭಾಗದ ಕೂಲಿಕಾರ್ಮಿಕರಿಗೆ ಉದ್ಯೋಗದ ಕೊರತೆ ಎದುರಾಗಿದೆ. ಇಂತಹ ಸಂದರ್ಭದಲ್ಲಿ ವಿಬಿಜಿ–ರಾಮ್‌ಜಿ (ಗಿಃ–ಉ ಖಂಒ–ಉ) ಯೋಜನೆಯು ಗ್ರಾಮೀಣ ಕೂಲಿಕಾರ್ಮಿಕರಿಗೆ ಆಸರೆಯಾಗಿದ್ದು, 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 1,800ಕ್ಕೂ ಅಧಿಕ ಮಂದಿ ಉದ್ಯೋಗ ಪಡೆದು ಕೆಲಸ ನಿರ್ವಹಿಸುತ್ತಿದ್ದಾರೆ.

ತಾಲೂಕಿನ ಬಹುತೇಕ ಗ್ರಾಮಗಳಲ್ಲಿ ಮಳೆಯ ಕೊರತೆಯಿಂದ ಕೃಷಿ ಚಟುವಟಿಕೆಗಳು ನಿರೀಕ್ಷಿತ ಪ್ರಮಾಣದಲ್ಲಿ ನಡೆಯದಿರುವುದರಿಂದ ಕೂಲಿಕಾರ್ಮಿಕರಿಗೆ ಉದ್ಯೋಗಾವಕಾಶಗಳು ಕಡಿಮೆಯಾಗಿವೆ. ಈ ಹಿನ್ನೆಲೆಯಲ್ಲಿ ವಿಬಿಜಿ–ರಾಮ್‌ಜಿ ಯೋಜನೆಯಡಿ ವಿವಿಧ ಅಭಿವೃದ್ಧಿ ಹಾಗೂ ಜಲ ಸಂರಕ್ಷಣಾ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಸ್ಥಳೀಯವಾಗಿಯೇ



ಕೂಲಿಕಾರ್ಮಿಕರಿಗೆ ಕೆಲಸ ದೊರೆ–ಯುತ್ತಿದೆ ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ ತಿಳಿಸಿದರು.

ತಾಲೂಕಿನ 22 ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕೆರೆಗಳ ಹೂಳೆತ್ತುವುದು, ಜಲ ಸಂರಕ್ಷಣೆ ಸೇರಿದಂತೆ ಯೋಜನೆಯಡಿ ಅನುಮೋದನೆಗೊಂಡಿರುವ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಇದರಿಂದ ಗ್ರಾಮೀಣ ಪ್ರದೇಶದ ಕಾರ್ಮಿಕರಿಗೆ ಉದ್ಯೋಗದ ಜೊತೆಗೆ ಗ್ರಾಮಗಳಲ್ಲಿನ ಜಲಮೂಲಗಳ ಸಂರಕ್ಷಣೆಗೆ ಸಹಕಾರಿಯಾಗುತ್ತಿದೆ.

ಕಾಮಗಾರಿಗಳ ಅಳತೆಗೆ ಕಟ್ಟುನಿಟ್ಟಿನ ಕ್ರಮ

ಯೋಜನೆಯಡಿ ಕೈಗೊಳ್ಳಲಾಗುತ್ತಿರುವ ಕೆರೆಗಳ ಹೂಳೆತ್ತುವ ಕಾಮಗಾರಿಗಳಲ್ಲಿ ನಿಯಮಾನುಸಾರ ಅಳತೆ ಮ

ಶಾರೀರಿಕ ಮತ್ತು ಮಾನಸಿಕ ಸದೃಢತೆಗೆ ಕ್ರೀಡೆ ಅತ್ಯಗತ್ಯ ಶಾಸಕ ಸಮರ್ಥ ಮಲ್ಲಿಕಾರ್ಜುನ್ ಶಾಮನೂರು

"ಮುಂಜಾನೆಯ ಮೆರಗು"

ದಾವಣಗೆರೆ ಸೆ, 17– ಕ್ರೀಡಾಪಟುಗಳು ಕ್ರೀಡಾಮನೋಭಾವದಿಂದ ಆಟವಾಡಿ ಟ್ರೋಫಿಗಳನ್ನು ಗೆದ್ದು ತವರೂರಿಗೆ ಕೊಂಡೊಯ್ಯುವಂತೆ ಯುವ ಕ್ರೀಡಾಪಟುಗಳಿಗೆ ಶಾಸಕರಾದ ಸಮರ್ಥ ಮಲ್ಲಿಕಾರ್ಜುನ್ ಶಾಮನೂರು ಕರೆ ನೀಡಿದರು.

ಗುರುವಾರ(ಸೆ.17) ರಂದು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ದಸರಾ ಕೀಡಾ ಕೂಟವನ್ನು ಉದ್ಘಾಟಿಸಿ ಮಾತನಾಡಿದರು.

ಕ್ರೀಡಾಕೂಟಕ್ಕೆ ಚನ್ನಗಿರಿ, ಜಗಳೂರು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಹೆಚ್ಚು ಯುವ ಕ್ರೀಡಾಪಟುಗಳು ಅತ್ಯಂತ ಉತ್ಸಾಹದಿಂದ ಭಾಗವಹಿಸಿ ಎಂದರು.

ಕಬಡ್ಡಿ, ಕ್ರಿಕೇಟ್, ಅಂಡ್ ಫೀಲ್ಡ್ ಸ್ಪರ್ಧೆಗಳು, ಒಳಾಂಗಣ ಕ್ರೀಡೆಗಳು ಹಾಗೂ ದೇವರಾಜ್ ಅರಸ್ ಈಜು ಕೊಳದಲ್ಲಿ ಈಜು ಸ್ಪರ್ಧೆಗಳನ್ನು



ಒಳಗೊಂಡಂತೆ ಹಲವು ವಿಭಾಗಗಳಲ್ಲಿ ಸ್ಪರ್ಧೆಗಳನ್ನು ಆಯೋಜಿಸಲಾಗಿದ್ದು, ದಿನದಿಂದ ದಿನಕ್ಕೆ ಇಂತಹ ಸಕ್ರಿಯ ಕ್ರೀಡಾ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದಕ್ಕೆ ಕ್ರೀಡಾಪಟುಗಳು ಹಾಗೂ ಅವರ ಪೋಷಕರು ತೀವ್ರ ಸಂತಸ ವ್ಯಕ್ತಪಡಿಸಿದ್ದಾರೆ ಎಂದರು.

ಬಾಲ್ಯದ ಕ್ರೀಡಾ ದಿನಗಳನ್ನು ನೆನಪಿಸಿಕೊಂಡು ಶಿಕ್ಷಣದ ಜೊತೆಗೆ ಕ್ರೀಡೆ ಕೂಡ ಅಷ್ಟೇ ಮುಖ್ಯ ನಾವು ಬೆಳೆಯುತ್ತಾ ಹೋದಂತೆ ಕ್ರೀಡಾಸಕ್ತಿ ಹಾಗೂ ದೈಹಿಕ ಚಟುವಟಿಕೆಗಳನ್ನು ಕೈಬಿಡದೆ ಮುಂದುವರಿಸಿಕೊಂಡು ಹೋಗಬೇಕು. ಇದು ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕೆ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟರು. ಜಿಲ್ಲಾಮಟ್ಟದ ಕ್ರೀಡಾಕೂಟವು ಅತ್ಯಂತ ಯಶಸ್ವಿಯಾಗಲಿ ಎಂದು ಸ್ಮರಿಸಿದ ಅವರು, ದೈಹಿಕ ಮತ್ತು ಮಾನಸಿಕ ಆರೋಗ್ಯಕ್ಕಾಗಿ ಪ್ರತಿಯೊಬ್ಬರೂ ಯಾವುದಾದರೂ ಒಂದು ದೈಹಿಕ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳುವುದು ಅತ್ಯಗತ್ಯ, ಕ್ರೀಡೆಗಳು ದಿನಪೂರ್ತಿ ಕ್ರಿಯಾಶೀಲವಾಗಿರಲು ನೆರವಾಗುವುದಲ್ಲದೆ, ವಿದ್ಯಾಭ್ಯಾಸದಲ್ಲಿ ಏಕಾಗ್ರತೆ ಮತ್ತು ಬದ್ಧತೆ ಬೆಳೆಸಿಕೊಳ್ಳಲು ಪೂರಕವಾಗಿ ಕೆಲಸ ಮಾಡುತ್ತವೆ. ತಮ್ಮ ವಿದ್ಯಾರ್ಥಿ ಜೀವನದ ಸಂಪೂರ್ಣ ಅವಧಿಯಲ್ಲಿ ತಾವೂ ಕೂಡ ವಾಲಿಬಾಲ್ ಕ್ರೀಡೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾಗಿ ನೆನಪಿಸಿಕೊಂಡು ಪ್ರಸ್ತುತ ಜಿಮ್ ಅಥವಾ ವಾಕಿಂಗ್‌ನಂತಹ ದೈಹಿಕ ಚಟುವಟಿಕೆಗಳಲ್ಲಿ ನಿರತರಾಗಿರುವುದಾಗಿ ತಿಳಿಸಿದರು.

ಯುವಜನತೆ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವುದರಿಂದ ಸಮಾಜಕ್ಕೆ ಕಂಟಕವಾಗುವ ದುರಭ್ಯಾಸಗಳಿಂದ ದೂರವಿರಬಹುದು. ಇದು ದೇಶಕ್ಕೆ ಸೇವೆಯನ್ನು ಸಲ್ಲಿಸುವ ಜವಾಬ್ದಾರಿಯುತ ಪ್ರಜೆಯಾಗಲು ನೆರವಾಗುತ್ತದೆ ಎಂದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ರೇಣುಕಾದೇವಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಅಧೀಕ್ಷಕಿ ಅರ್ಪಿತಾ, ಯೋಗಸಾನ ತರಬೇತುದಾರರಾದ ಪರಶುರಾಮ ಹಾಗೂ ಕ್ರೀಡಾಪಟುಗಳು ಭಾಗವಹಿಸಿದ್ದರು.

ಲೋಕ ಕಲ್ಯಾಣ, ಉತ್ತಮ ಮಳೆ–ಬೆಳೆಗಾಗಿ ವಿಶ್ವಕರ್ಮ ಮಹಾಗಣಹೋಮ
100 ಜನರಿಗೆ ಭಗವದ್ಗೀತಾ ನೀಡಿ ಸನ್ಮಾನಿಸಲಾಯಿತು

"ಮುಂಜಾನೆಯ ಮೆರಗು"

ದಾವಣಗೆರೆ ಸೆ, 17– ದೇಶವ್ಯಾಪಿ ಭಗವಾನ್ ವಿಶ್ವಕರ್ಮ ಜಯಂತ್ಯೋತ್ಸವದ ಸಡಗರ ಮನೆಮಾಡಿದ್ದು, ನಗರದ ವಿನೋಬಾ ನಗರದಲ್ಲಿ ವಿಶ್ವಕರ್ಮ ಸಮಾಜದ ವತಿಯಿಂದ ಅತ್ಯಂತ ಶ್ರದ್ಧಾ–ಭಕ್ತಿಯಿಂದ ವಿಶ್ವಕರ್ಮ ಮಹಾಗಣಹೋಮ ನೆರವೇರಿಸಲಾಯಿತು.

ಗಣೇಶೋತ್ಸವದ ಅಂಗವಾಗಿ ವಿನೋಬಾ ನಗರದಲ್ಲಿ ವಿಶ್ವಕರ್ಮ ಸಮಾಜದಿಂದ ಪ್ರತಿಷ್ಠಾಪಿಸಲಾಗಿರುವ ಗಣಪತಿ ಸನ್ನಿಧಿಯಲ್ಲಿ, ವಿಶ್ವಕರ್ಮ ಜಯಂತಿಯ ಶುಭ ಸಂದರ್ಭದಲ್ಲಿ ವಿಶೇಷ ಪೂಜಾ ಕೈಂಕರ್ಯ ಹಾಗೂ ಮಹಾಗಣಹೋಮವನ್ನು ಹಮ್ಮಿಕೊಳ್ಳಲಾಗಿತ್ತು.

ರಾಜ್ಯದಲ್ಲಿ ತಲೆದೂರಿರುವ ಬರಗಾಲದ ಪರಿಸ್ಥಿತಿಯಿಂದಾಗಿ ಸಮಾಜದ ಬಾಂಧವರಿಗೆ ಹಾಗೂ ಕಾರ್ಮಿಕರಿಗೆ ಕೆಲಸದ ಕೊರತೆ ಎದುರಾಗಿದೆ. "ರೈತರು ಕ್ಷೇಮವಾಗಿ ಇದ್ದರೆ ಇಡೀ ಸಮಾಜವೇ ಕ್ಷೇಮವಾಗಿ ಇರುತ್ತದೆ" ಎಂಬ ಭಾವನೆಯೊಂದಿಗೆ, ಸಕಾಲದಲ್ಲಿ ಉತ್ತಮ ಮಳೆಯಾಗಿ ಬೆಳೆ ಚೆನ್ನಾಗಿ ಬರಲಿ, ರೈತರಿಗೆ ಯಾವುದೇ ತೊಂದರೆಯಾಗದಿರಲಿ ಎಂದು ಲೋಕಕಲ್ಯಾಣಾರ್ಥವಾಗಿ ವಿಘ್ನನಿವಾರಕ ಗಣೇಶನಿಗೆ ಪ್ರಾರ್ಥನೆ ಸಲ್ಲಿಸಲಾಯಿತು. ಈ ವೇಳೆ ವಿಶೇಷವಾಗಿ 100 ಜನರಿಗೆ ಭಗವದ್ಗೀತಾ ಕೊಟ್ಟು ಸನ್ಮಾನಿಸಲಾಯಿತು.



ವಿವಿಧ ಧಾರ್ಮಿಕ ವಿಧಿವಿಧಾನಗಳು, ವಿಶೇಷ ಪೂಜೆ ಹಾಗೂ ಮಹಾಗಣಹೋಮದ ಮೂಲಕ ವಿನೋಬಾ ನಗರದಲ್ಲಿ ವಿಶ್ವಕರ್ಮ ಜಯಂತ್ಯೋತ್ಸವವನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಯಿತು.

ಪತ್ನಿಯನ್ನು ಅಟ್ಟಾಡಿಸಿಕೊಂಡು ಹೋಗಿ ಮಚ್ಚಿನಿಂದ ಹಲ್ಲೆ ಮಾಡಿ ಆ್ಯಸಿಡ್ ಎರಚಿದ ಪತಿ

"ಮುಂಜಾನೆಯ ಮೆರಗು"

ಬೆಂಗಳೂರು,ಸೆ.17– ಜೆ.ಪಿ ನಗರದಲ್ಲಿ ಬೆಚ್ಚಿಬೀಳಿಸುವ ಘಟನೆ ನಡೆದಿದ್ದು, ಹಾಡಹಗಲೇ ಪತ್ನಿಯನ್ನು ಅಟ್ಟಾಡಿಸಿಕೊಂಡು ಹೋಗಿ ಮಚ್ಚಿನಿಂದ ಹಲ್ಲೆ ಮಾಡಿ ಆ್ಯಸಿಡ್ ಎರಚಿರುವ ಘಟನೆ ನಡೆದಿದೆ. ಜೆ.ಪಿ.ನಗರದ ನಾರಾಯಣ ಆಸ್ಪತ್ರೆಯಲ್ಲಿ ನರ್ಸ್ ಆಗಿ ಕರ್ತವ್ಯ ನಿರ್ವಹಿಸುತ್ತಿರುವ ಮಧುಮಿತಾ ಹಲ್ಲೆಗೊಳಗಾದ ಸಂತ್ರಸ್ತೆ.

2023 ರಲ್ಲಿ ತಮಿಳುನಾಡಿನ ಮಧುರೈ ಮೂಲದ ನಿವಾಸಿ ವೆಂಕಟೇಶನ್ ಎಂಬಾತನನ್ನು ಮಧುಮಿತಾ ವಿವಾಹವಾಗಿದ್ದರು. ನಂತರ ಅವರ ದಾಂಪತ್ಯ ಜೀವನದಲ್ಲಿ ಬಿರುಕುಂಟಾಗಿದೆ. ವೈವಾಹಿಕ ಭಿನ್ನಾಭಿಪ್ರಾಯ ಹಾಗೂ ಕೌಟುಂಬಿಕ ಕಲಹದ ಕಾರಣಗಳಿಂದ ದಂಪತಿ ಬೇರ್ಪಟ್ಟು ಕಳೆದ ಒಂದು ವರ್ಷದಿಂದ ಪ್ರತ್ಯೇಕವಾಗಿದ್ದಾರೆ.

ವೆಂಕಟೇಶನ್ ಚೆನ್ನೈನಲ್ಲಿ ವಾಸವಾಗಿದ್ದರೆ, ಮಧುಮಿತಾ ಬೆಂಗಳೂರಿನಲ್ಲಿ ನೆಲೆಸಿದ್ದಾರೆ.



ಜೆ.ಪಿ.ನಗರದ ನಾರಾಯಣ ಆಸ್ಪತ್ರೆಯಲ್ಲಿ ಕಳೆದ ಒಂದೂವರೆ ವರ್ಷದಿಂದ ನರ್ಸ್ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇಂದು ಬೆಳಗ್ಗೆ ಮಧುಮಿತಾ ಅವರು ಎಂದಿನಂತೆ ಆಸ್ಪತ್ರೆಗೆ ಬಂದಿದ್ದಾರೆ. ಬೆಳಗ್ಗೆ 9.15 ರ ಸುಮಾರಿನಲ್ಲಿ ಮಧುಮಿತಾ ಅವರು ತಿಂಡಿ ತಿನ್ನಲು ಆಸ್ಪತ್ರೆಯಿಂದ ಹೊರಗೆ ಬಂದಿದ್ದಾರೆ.

ಚೆನ್ನೈನಿಂದ ನಗರಕ್ಕೆ ಬಂದಿದ್ದ ವೆಂಕಟೇಶನ್ ಇದೇ ಸಮಯಕ್ಕಾಗಿ ಕಾದು ಸಂಚು ರೂಪಿಸಿ ಇಂದು ಬೆಳಗ್ಗೆ ಪತ್ನಿ ಕೆಲಸ ಮಾಡುತ್ತಿದ್ದ ಆಸ್ಪತ್ರೆ ಬಳಿ ಬೈಕ್‌ನಲ್ಲಿ ಬಂದು ಹೊಂಚು ಹಾಕಿ ತಾನು ತಂದಿದ್ದ ಮಾರಕಾಸ್ತ್ರದಿಂದ ಏಕಾಏಕಿ ಆಕೆಯ ಮೇಲೆ ದಾಳಿ ಮಾಡಲು ಮುಂದಾಗಿದ್ದಾನೆ.ತಕ್ಷಣ ಆಕೆ ಆತನಿಂದ ತಪ್ಪಿಸಿಕೊಳ್ಳಲು ಚೀರಾಡಿ–ಕೊಂಡು ಆಸ್ಪತ್ರೆಯ ಪಾರ್ಕಿಂಗ್ ಜಾಗಕ್ಕೆ ಓಡಿದರೂ ಬಿಡದೆ ಆಕೆಯನ್ನು ಸಿನಿಮೀಯ ರೀತಿಯಲ್ಲಿ ಅಟ್ಟಾಡಿಸಿಕೊಂಡು ಹೋಗಿ ಮಾರಕಾಸ್ತ್ರದಿಂದ ಹಲ್ಲೆ ನಡೆಸಿದ್ದಲ್ಲದೇ ಆ್ಯಸಿಡ್ ಎರಚಿ ಪರಾರಿಯಾಗಲು ಯತ್ನಿಸಿದ್ದಾನೆ.

ಆ ಸಂದರ್ಭದಲ್ಲಿ ರಸ್ತೆಯ ಪಕ್ಕದ ಸಿಗ್ನಲ್‌ನಲ್ಲಿ ಕರ್ತವ್ಯದಲ್ಲಿದ್ದ ಸಂಚಾರಿ ಪೊಲೀಸರು ಸಾರ್ವಜನಿಕರ ಸಹಾಯದಿಂದ ಆತನನ್ನು ವಶಕ್ಕೆ ಪಡೆದು ಬಳಿಕ ಜೆ.ಪಿ.ನಗರ ಠಾಣೆ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ.

ಪತಿಯಿಂದ ಹಲ್ಲೆಗೊಳಗಾದ ಮಧುಮಿತಾ ಅವರನ್ನು ಸ್ಥಳೀಯ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದ್ದು ಆಕೆಯ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಜೆ.ಪಿನಗರ ಠಾಣೆ ಪೊಲೀಸರು ಆಗಮಿಸಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಹುಟ್ಟುಹಬ್ಬದ ಶುಭ ಕೋರಿದ ದೇಶದ ಜನತೆಗೆ ಪ್ರಧಾನಿ ಮೋದಿ ಧನ್ಯವಾದ

"ಮುಂಜಾನೆಯ ಮೆರಗು"

ನವದೆಹಲಿ, ಸೆ.17– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ 76ನೇ ಜನ್ಮದಿನದ ಸಂದರ್ಭದಲ್ಲಿ ಶುಭಾಶಯ ಕೋರಿದ ದೇಶದ ಜನತೆಗೆ ಧನ್ಯವಾದ ಅರ್ಪಿಸಿದ್ದು, ಬಿಜೆಪಿ ಆರಂಭಿಸಿರುವ 'ಆಶೀರ್ವಾದ್ ಕಾ ದಿಯಾ' ಅಭಿಯಾನವನ್ನು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

ಈ ಅಭಿಯಾನವು ತಮ್ಮನ್ನು ಆಳವಾಗಿ ಸ್ಪರ್ಶಿಸಿದ ಪ್ರೀತಿಯ ಅಭಿವ್ಯಕ್ತಿ ಎಂದು ಬಣ್ಣಿಸಿರುವ ಅವರು, ಲಭಿಸುತ್ತಿರುವ ಪ್ರತಿಯೊಂದು ಆಶೀರ್ವಾದವೂ ದೇಶ ಸೇವೆಯ ತಮ್ಮ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದಿದ್ದಾರೆ.

ತಮ್ಮ ಜನ್ಮದಿನ ಹಾಗೂ ಸಾರ್ವಜನಿಕ ಸೇವೆಯ 25 ವರ್ಷಗಳನ್ನು ಗುರುತಿಸಿ ಕಲಾವಿದರಾದ ಅಮನ್ ಪಂತ್ ಮತ್ತು ಸ್ನೇಹಾ ಶಂಕರ್ ಅವರು ಸಮರ್ಪಿಸಿದ 'ಆಶೀರ್ವಾದ್ ಕಾ ದಿಯಾ' ವಿಶೇಷ ಹಾಡಿಗೆ ಪ್ರಧಾನಿಯವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿದ್ದಾರೆ.

'ಕೆಲವು ಸನ್ನೆಗಳು ಬಹಳ ವಿಶೇಷವಾಗಿ ಉಳಿಯುತ್ತವೆ! #ಥ್ಯಾಂಕ್ಯೂಪಿಎಂಮೋದಿ–ಥಿಚ್ ಎಂಬುದು ನನ್ನನ್ನು ಆಳವಾಗಿ ಸ್ಪರ್ಶಿಸಿದ ಪ್ರೀತಿಯ ಅಭಿವ್ಯಕ್ತಿಯಾಗಿದೆ. ಪ್ರತಿಯೊಂದು ಆಶೀರ್ವಾದವೂ ನಮ್ಮ ಪ್ರೀತಿಯ ಭಾರತಕ್ಕೆ ಇನ್ನೂ ಹೆಚ್ಚಿನ ಭಕ್ತಿಯಿಂದ ಸೇವೆ ಸಲ್ಲಿಸುವ ನನ್ನ ಸಂಕಲ್ಪವನ್ನು ಬಲಪಡಿಸುತ್ತದೆ' ಎಂದು ಮೋದಿ ಬರೆದುಕೊಂಡಿದ್ದಾರೆ.

2001ರ ಅಕ್ಟೋಬರ್ 7ರಂದು ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಳ್ಳುವ ಮೂಲಕ ಸಾರ್ವಜನಿಕ



ಆಡಳಿತ ಜೀವನಕ್ಕೆ ಪದಾರ್ಪಣೆ ಮಾಡಿದ ನರೇಂದ್ರ ಮೋದಿ ಅವರು, 2014ರಲ್ಲಿ ದೇಶದ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡರು. ಪ್ರಸ್ತುತ ಅವರು ಸಾರ್ವಜನಿಕ ಸೇವೆಯಲ್ಲಿ ಯಶಸ್ವಿ 25 ವರ್ಷಗಳನ್ನು ಪೂರೈಸುತ್ತಿದ್ದಾರೆ.

ಪ್ರಧಾನಿಯವರ ಜನ್ಮದಿನದ ಅಂಗವಾಗಿ ದೇಶದ ಪ್ರತಿಯೊಬ್ಬ ನಾಗರಿಕರೂ ತಮ್ಮ ಮನೆಗಳಲ್ಲಿ ದೀಪ ಬೆಳಗಿಸಿ ಅವರ ದೀರ್ಘಾಯುಷ್ಯ ಮತ್ತು ಯಶಸ್ಸಿಗಾಗಿ ಪ್ರಾರ್ಥಿಸುವಂತೆ ಬಿಜೆಪಿ ರಾಷ್ಟ್ರೀಯ ಕಾರ್ಯಾಧ್ಯಕ್ಷ ನಿತಿನ್ ನಬಿನ್ ಕರೆ ನೀಡಿ–ದ್ದಾರೆ.

ಈ ಉಪಕ್ರಮವು ಸೆಪ್ಟೆಂಬರ್ 17ರಿಂದ ಅಕ್ಟೋಬರ್ 17ರವರೆಗೆ ದೇಶಾದ್ಯಂತ ನಡೆಯಲಿರುವ ಬಿಜೆಪಿಯ 'ಸೇವಾ ಸಂಕಲ್ಪ' ಅಭಿಯಾನದ ಭಾಗವಾಗಿದೆ. ಜನಸೇವಾ ಚಟುವಟಿಕೆಗಳು: ಈ ಅವಧಿಯಲ್ಲಿ ರಕ್ತದಾನ ಶಿಬಿರಗಳು, ಸ್ವಚ್ಛತಾ ಅಭಿಯಾನಗಳು, ಸಾರ್ವಜನಿಕ ಪ್ರದರ್ಶನಗಳು, ವಿಚಾರ ಸಂಕಿರಣಗಳು ಹಾಗೂ ಸರ್ಕಾರಿ ಯೋಜನೆಗಳನ್ನು ತಲುಪಿಸುವ 'ಸೇವಾ ಸೇತು' ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಈ ಆಚರಣೆಯ ಭಾಗವಾಗಿ ದೇಶಾದ್ಯಂತ 500ಕ್ಕೂ ಹೆಚ್ಚು ಪ್ರಮುಖ ಸ್ಥಳಗಳಲ್ಲಿ ದೀಪಾಲಂಕಾರ ಹಾಗೂ ವಿಶೇಷ ಕಾರ್ಯಕ್ರಮಗಳು ನಡೆಯುತ್ತಿವೆ.

ಆಂಟಿಯ ಮೋಡಿಗೆ ಮರುಳಾಗಿ ಲಕ್ಷಾಂತರ ಹಣ ಕಳೆದುಕೊಂಡ ಟ್ಯಾಟೂ ಆರ್ಟಿಸ್ಟ್

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.17– ಟ್ಯಾಟೂ ಆರ್ಟಿಸ್ಟ್‌ನನ್ನು ಮರುಳು ಮಾಡಿದ ಎರಡು ಮಕ್ಕಳ ತಾಯಿ, ಮದುವೆಯಾಗುವುದಾಗಿ ನಂಬಿಸಿ ಆತನಿಂದ ಲಕ್ಷಾಂತರ ರೂ. ಹಣ ಪಡೆದು ವಂಚಿಸಿರುವ ಘಟನೆ ಬ್ಯಾಡರಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಎರಡು ವರ್ಷಗಳ ಹಿಂದೆ ಟ್ಯಾಟೂ ಸ್ಟುಡಿಯೋದಲ್ಲಿ ಟ್ಯಾಟೂ ಮಾಡಿಸಲು ಪರಿಚಯವಾದ ಮಹಿಳೆ, ತನಗೆ ಮದುವೆಯಾಗಿದ್ದು,



ಎರಡು ಮಕ್ಕಳಿದ್ದಾರೆ. ಆದರೆ, ಗಂಡ ಕಾರಣಾಂತರಗಳಿಂದ ಮೃತಪಟ್ಟಿದ್ದಾರೆ ಎಂದು ಹೇಳಿದ್ದಾಳೆ. ಈ ನಡುವೆ ಇಬ್ಬರ ನಡುವೆ ಸ್ನೇಹವಾಗಿ, ಪ್ರೀತಿಗೆ ತಿರುಗಿದೆ. ಆತನಿಗೂ ಪ್ರತಿಯಾಗಿ ವಿಚ್ಛೇದನವಾಗಿತ್ತು. ಈ ವೇಳೆ ಆತನನ್ನು ಮದುವೆಯಾಗುವುದಾಗಿ ಮಹಿಳೆ ನಂಬಿಸಿದ್ದಾಳೆ.

ಮಹಿಳೆಯ ಮಾತು ನಂಬಿ ಟ್ಯಾಟೂ ಆರ್ಟಿಸ್ಟ್ ಹಲವು ಬಾರಿ ಆಕೆಗೆ ಹಣ ಕೊಟ್ಟಿದ್ದಾನೆ. ಈ ಮಧ್ಯೆ ಕಳೆದ ಒಂದು ವರ್ಷದಿಂದ ಮದುವೆ ವಿಷಯ ಪ್ರಸ್ತಾಪವಾದಾಗಲೆಲ್ಲಾ ಮಹಿಳೆ ಮುಂದೂಡುತ್ತಲೇ ಬಂದಿದ್ದಾಳೆ. ಇತ್ತೀಚೆಗೆ ಆತ ಮಹಿಳೆಗೆ ಕರೆ ಮಾಡಿದಾಗ, ಆಕೆ ಕರೆ ಸ್ವೀಕರಿಸದಿದ್ದರಿಂದ ಖುದ್ದಾಗಿ ಮನೆ ಬಳಿ ತೆರಳಿದ್ದಾನೆ. ಈ ವೇಳೆ ಪರಪುರುಷನ ಜೊತೆ ಅಶ್ಲೀಲವಾಗಿ ಆಕೆ ಮಾತನಾಡುತ್ತಿದ್ದುದನ್ನು ಗಮನಿಸಿ ಪ್ರಶ್ನಿಸಿದ್ದಾನೆ.

ಇವರಿಬ್ಬರ ನಡುವೆ ಮಾತಿಗೆ ಮಾತು ಬೆಳೆದು ಜಗಳವಾಗಿದೆ. ಈ ವೇಳೆ ಮಹಿಳೆ ಕಬ್ಬಿಣದ ರಾಡಿನಿಂದ ಆತನ ಮೇಲೆ ಹಲ್ಲೆ ನಡೆಸಿದ್ದಾಳೆ.ಹಲ್ಲೆ ಸಂಬಂಧ ಟ್ಯಾಟೂ ಆರ್ಟಿಸ್ಟ್ ಬ್ಯಾಡರಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಇತ್ತೀಚೆಗೆ ಟ್ಯಾಟೂ ಆರ್ಟಿಸ್ಟ್‌ಗೆ ಸಿನಿಮಾಗಳಲ್ಲೂ ನಟಿಸಲು ಅವಕಾಶ ಸಿಕ್ಕಿತ್ತು. ಈತ ಸಾಮಾಜಿಕ ಜಾಲತಾಣದಲ್ಲಿ ಒಂದು ಮಿಲಿಯನ್‌ಗೂ ಅಧಿಕ ಫಾಲೋವರ್ಸ್ ಹೊಂದಿದ್ದಾರೆ.

ಹಾಲು ಉತ್ಪಾದಕರ ಸಹಕಾರ ಸಂಘ ನಿ., ಮಿಟ್ಲಕಟ್ಟೆ ಇದರ ನೋಂದಣಿ ರದ್ದತಿ

"ಮುಂಜಾನೆಯ ಮೆರಗು"

ದಾವಣಗೆರೆ ಸೆ, 17– ಹಾಲು ಉತ್ಪಾದಕರ ಸಹಕಾರ ಸಂಘ ನಿ.ಮಿಟ್ಲಕಟ್ಟೆ, ತಾ:ಹರಿಹರ, ಈ ಸಹಕಾರ ಸಂಘವು ಸಹಕಾರ ಸಂಘಗಳ ಕಾಯ್ದೆ ಹಾಗೂ ಬೈಲಾ ರೀತ್ಯಾ ಹಾಗೂ ಸ್ಥಾಪನೆ ಉದ್ದೇಶಗಳ ರೀತ್ಯಾ ಕಾರ್ಯ ಚಟುವಟಿಗಳನ್ನು ನಡೆಸದೆ ಸ್ಥಗಿ–ತಗೊಂಡಿದ್ದರ ಮೇರೆಗೆ ಸಹಕಾರ ಸಂಘಗಳ ಉಪ ನಿಬಂಧಕರು, ಸಂಘವನ್ನು ಸಮಾಪನೆಗೊಳಿಸಿ ನನ್ನನ್ನು ಸಮಾಪನಾಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.

ಈ ಸಂಘವನ್ನು ಪುನ:ಶ್ಚೇತನಗೊಳಿಸಲು ಯಾರು ಮುಂದೆ ಬಂದಿರುವುದಿಲ್ಲ. ಈ ಸಹಕಾರ ಸಂಘದ ಲೆಕ್ಕ ಪುಸ್ತಕಗಳು, ಚರ ಮತ್ತು ಸ್ಥಿರಾಸ್ತಿಯ ಇರುವಿಕೆಯ ಬಗ್ಗೆ ಮಾಹಿತಿ ದೊರೆಯದ ಪ್ರಯುಕ್ತ ಸಂಘದ ಸಮಸ್ತ ಚಾರ್ಜ್ ಸಿಬ್ಬಂದಿಯವರಾಗಲೀ, ಸದಸ್ಯರಾಗಲೀ, ಆಡಳಿತ ಮಂಡಳಿ ಪಡೆಯಲಾಗಿರುವುದಿಲ್ಲ. ಸಂಘದ ನಿರ್ದೇಶಕರಾಗಲೀ ಅಥವಾ ಸಾರ್ವಜನಿಕರಿಂದಾಗಲೀ, ಈ ಸಂಘದ ಲೆಕ್ಕ ಪುಸ್ತಕ ಗಳ ಇರುವಿಕೆಯ ಬಗ್ಗೆ ಮಾಹಿತಿ ಇದ್ದಲ್ಲಿ ದಾಖಲೆಗಳ ಸಹಿತ ಸಮಾಪಕರು ಹಾಲು ಉತ್ಪಾದಕರ ಸಹಕಾರ ಸಂಘ ನಿ, ಮಿಟ್ಲಕಟ್ಟೆ, ಹಾಗೂ ಸಹಕಾರ ಅಭಿವೃದ್ಧಿ ಅಧಿಕಾರಿ, ಹರಿಹರ ಇವರಿಗೆ ಈ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಸಲ್ಲಿಸುವುದು. ಮಾಹಿತಿ ಬಾರದೇ ಇದ್ದಲ್ಲಿ ಸಂಘದ ಈ ಅವಧಿಯೊಳಗಾಗಿ ಯಾವುದೇ ಅಹವಾಲು, ನೋಂದಣಿಯನ್ನು ರದ್ದುಪಡಿಸಲು ಕ್ರಮವಿಡಲಾಗುವುದು. ನೋಂದಣಿ ರದ್ದತಿ ನಂತರ ಯಾವುದೇ ರೀತಿಯ ಜವಾಬ್ದಾರಿಗಳಿಗೆ ಸಮಾಪಕರು ಹೊಣೆಗಾರರಾಗುವುದಿಲ್ಲ ಹಾಗೂ ಯಾವುದೇ ಅಹವಾಲು ಇಲ್ಲವೆಂದು ನಡವಳಿ ಜರುಗಿಸಿ ನೋಂದಣಿ ರದ್ದತಿ ಮಾಡಲಾಗುವುದೆಂದು ಹಾಲು ಉತ್ಪಾದಕರ ಸಹಕಾರ ಸಂಘ ನಿ, ಮಿಟ್ಲಕಟ್ಟೆಯ ಸಮಾಪನಾಧಿಕಾರಿ ತಿಳ

ಸಚಿವರ ನಡವಳಿಕೆ ವಿರುದ್ಧ ಹೈಕಮಾಂಡ್ ಅಸಮಾಧಾನ

"ಮುಂಜಾನೆಯ ಮೆರಗು"

ಬೆಂಗಳೂರು, ಸೆ.17– ವಿಧಾನಸಭೆ ಚುನಾವಣೆಗೆ ಒಂದೂವರೆ ವರ್ಷ ಬಾಕಿಯಿರುವ ಸಂದರ್ಭದಲ್ಲೇ ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಕೆಲ ಸಚಿವರ ನಡವಳಿಕೆ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ನಾಯಕತ್ವ ಬದಲಾವಣೆ, ಸಚಿವ ಸಂಪುಟ ಪುನರ್ ರಚನೆ ಸೇರಿದಂತೆ ಹಲವಾರು ಸಂದರ್ಭಗಳಲ್ಲಿ ನೀಡಿದ್ದ ಸೂಚನೆಯನ್ನು ಕಡೆಗಣಿಸಿ ಕೆಲ ಸಚಿವರು ತಮ ಮನಸ್ಸೋ ಇಚ್ಛೆ ನಡೆದುಕೊಳ್ಳುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಲಾಗಿದೆ.

ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ.ವೇಣುಗೋಪಾಲ್ ಮತ್ತು ರಣದೀಪ್ ಸಿಂಗ್ ಸುರ್ಜೇವಾಲ ಅವರು ನಿನ್ನೆ ಬೆಂಗಳೂರಿನ ಪಕ್ಷದ ಕಚೇರಿಯಲ್ಲಿ ನಡೆಸಿದ ಸಭೆಯಲ್ಲಿ ಹಲವು ಮಹತ್ವದ ವಿಚಾರಗಳು ಚರ್ಚೆಯಾಗಿವೆ.

ಬರ ನಿರ್ವಹಣೆ ವಿಚಾರದಲ್ಲಿ ಹಣಕಾಸು ಸೌಲಭ್ಯ ಒದಗಿಸುವ ಬದಲಾಗಿ ಬೇರೆ ಬೇರೆ ಯೋಜನೆಗಳತ್ತ ಗಮನಹರಿಸುವುದು ಅನಪೇಕ್ಷಣೆಯ. ಬರ ಪರಿಸ್ಥಿತಿಯಂತಹ ಸೂಕ್ಷ್ಮ ಸಂದರ್ಭದಲ್ಲಿ ಸರ್ಕಾರ ಸಮರೋಪಾದಿಯಲ್ಲಿ ಕೆಲಸ ಮಾಡಬೇಕಿತ್ತು. ಆದರೆ ಕೆಲ ಸಚಿವರು ಇನ್ನೂ ಕಾರ್ಯನಿರ್ವಹಣೆಯನ್ನು ಆರಂಭಿಸಿಲ್ಲ. ಇನ್ನೂ ಕೆಲವರು ತಮ ಕ್ಷೇತ್ರಕ್ಕೆ ಸೀಮಿತವಾಗಿದ್ದಾರೆ ಎಂದು ಶಾಸಕರು ಆರೋಪಿಸುತ್ತಿದ್ದಾರೆ.

ಕೆಲವು ಗುತ್ತಿಗೆ ಕಾಮಗಾರಿಗಳಲ್ಲಿ ಭ್ರಷ್ಟಾಚಾರ ನಡೆಯುತ್ತಿದೆ ಎಂದು ಆಡಳಿತ ಪಕ್ಷದ ಶಾಸಕರೇ ಬಹಿರಂಗ ಪತ್ರ ಬರೆಯುತ್ತಿದ್ದಾರೆ. ಹೀಗಿದ್ದಾಗ ವಿರೋಧ ಪಕ್ಷದವರು ಸುಮನೆ ಇರುತ್ತಾರೆಯೇ? ಚುನಾವಣೆಯ ಸಮೀಪದ ವೇಳೆಯಲ್ಲಿ ಪ್ರತಿಯೊಂದು ವಿಚಾರದ ಬಗ್ಗೆಯೂ ಎಚ್ಚರಿಕೆಯಿಂದ ಇರಬೇಕು ಎಂದು ವೇಣುಗೋಪಾಲ್ ತಾಕೀತು ಮಾಡಿದ್ದಾರೆ.



ಮುಂದಿನ ಅವಧಿಗೆ ಸರ್ಕಾರ ಮರಳಿ ಅಧಿಕಾರಕ್ಕೆ ಬರಲೇಬೇಕು. ಇಲ್ಲದೇ ಹೋದರೆ ಕಾಂಗ್ರೆಸ್‌ಗೆ ರಾಷ್ಟ್ರ ಮಟ್ಟದಲ್ಲಿ ಅಳಿವು-ಉಳಿವಿನ ಪ್ರಶ್ನೆ ಎದುರಾಗಲಿದೆ.

ಶಾಸಕರು, ಸಚಿವರು ಪಕ್ಷದ ಸೂಚನೆಗೆ ಸ್ಪಂದಿಸದೇ ಇದ್ದರೆ ಮುಂದಿನ ಚುನಾವಣೆಯಲ್ಲಿ ಸ್ಪರ್ಧಿಸಲು ಯಾವ ಕಾರಣಕ್ಕೂ ಅವಕಾಶ ನೀಡುವುದಿಲ್ಲ. ಈ ಬಾರಿ ಪ್ರಭಾವಗಳಿಗೆ ಮಣಿಯುವುದಿಲ್ಲ, ಶಾಸಕರ, ಸಚಿವರ ಕಾರ್ಯನಿರ್ವಹಣೆ, ಸಕ್ರಿಯ ಭಾಗವಹಿಸುವಿಕೆ ಹಾಗೂ ಪಕ್ಷ ನಿಷ್ಠೆಯನ್ನು ಪ್ರಮುಖ ವಿಚಾರವನ್ನಾಗಿ ಪರಿಗಣಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಎಸ್‌ಐಆರ್ ವಿಚಾರವಾಗಿ ಮತ್ತಷ್ಟು ಜಾಗ್ರತೆ ವಹಿಸುವಂತೆ ಪ್ರಧಾನ ಕಾರ್ಯದರ್ಶಿಗಳು ತಾಕೀತು ಮಾಡಿದ್ದಾರೆ. ಗಣೇಶೋತ್ಸವ, ದಸರಾ ಆಚರಣೆ ಸೇರಿದಂತೆ ಹಲವಾರು ಸಂದರ್ಭಗಳಲ್ಲಿ ಬಿಜೆಪಿ ಕೋಮು ಸಂಘರ್ಷದ ಮೂಲಕ ಶಾಂತಿಭಂಗ ಉಂಟುಮಾಡುವ ಸಾಧ್ಯತೆ ಇದೆ. ಇದನ್ನು ತಡೆಯಲು ಸಾಕಷ್ಟು ಮುಂಜಾಗ್ರತೆ ಅಗತ್ಯ.

ಗೃಹ ಇಲಾಖೆ ಅತ್ಯಂತ ಎಚ್ಚರಿಕೆಯಿಂದ ಇದ್ದು, ಜನರ ನೆಮದಿಗೆ ಭಂಗ ಉಂಟಾಗದಂತೆ ಕ್ರಮಕೈಗೊಳ್ಳಬೇಕು. ಸಮಾಜ ಘಾತಕ ಶಕ್ತಿಗಳ ವಿರುದ್ಧ ಕಠಿಣಕ್ರಮ ಕೈಗೊಳ್ಳಬೇಕು. ಅನಗತ್ಯ ವಿವಾದಗಳಿಗೆ ತಲೆ ಹಾಕಬಾರದು ಎಂದು ಸಲಹೆ ನೀಡಿರುವುದಾಗಿ ತಿಳಿದು ಬಂದಿದೆ.

ಕೆಲ ಸಚಿವರು ಶಾಸಕರಿಗೆ ಸ್ಪಂದಿಸುತ್ತಿಲ್ಲ ಎಂಬ ಆರೋಪಗಳ ಬಗ್ಗೆ ಕೆ.ಸಿ.ವೇಣುಗೋಪಾಲ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇಂತಹ ವಿಚಾರದಲ್ಲಿ ಮುಖ್ಯಮಂತ್ರಿಯವರು ಮುಲಾಜಿಲ್ಲದೆ ಕ್ರಮ ಜರುಗಿಸಬೇಕು. ಅಂತಹ ಸಚಿವರ ಕುರಿತಂತೆ ಹೈಕಮಾಂಡ್‌ಗೆ ವರದಿ ನೀಡುವಂತೆ ಸಲಹೆ ನೀಡಿದ್ದಾರೆ.

ನಿಗಮ ಮಂಡಳಿಗಳ ನೇಮಕಾತಿ ಹಾಗೂ ಸ್ಥಳೀಯ ಸಂಸ್ಥೆಗಳ ಅಭ್ಯರ್ಥಿಗಳ ಆಯ್ಕೆ ವೇಳೆ ಪಕ್ಷ ನಿಷ್ಠಾವಂತರಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚನೆ ನೀಡಿದ್ದಾರೆ.ಕಳೆದ ಮೂರು ತಿಂಗಳಲ್ಲಿ ಹೈಕಮಾಂಡ್ ನಾಯಕರು ರಾಜ್ಯಕ್ಕಾಗಮಿಸಿ, ಸರ್ಕಾರವನ್ನು ಸರಿದಾರಿಗೆ ತರುವ ಪ್ರಯತ್ನ ಮಾಡಿದ್ದಾರೆ. ಆರಂಭದಿಂದಲೂ ಕೆಲ ಸಚಿವರ ನಡವಳಿಕೆಗಳು ಮುಖ್ಯಮಂತ್ರಿ ಸೇರಿದಂತೆ ಕಾಂಗ್ರೆಸ್ಸ ಹಿರಿಯ ನಾಯಕರಿಗೆ ಬಿಸಿ ತುಪ್ಪವಾಗಿದೆ. ಇದಕ್ಕಾಗಿ ಮೊದಲ ಹಂತದ ಸಭೆಯಲ್ಲೇ ಹೈಕಮಾಂಡ್ ಕಠಿಣ ಎಚ್ಚರಿಕೆಯನ್ನು ರವಾನಿಸಿದೆ.

50 ಲಕ್ಷ ರೂ. ಲಂಚ ಸ್ವೀಕರಿಸುತ್ತಿದ್ದ ತಹಶೀಲ್ದಾರ್ ಲೋಕಾಯುಕ್ತ ಬಲೆಗೆ

"ಮುಂಜಾನೆಯ ಮೆರಗು"



ಧಾರವಾಡ, ಸೆ.16– ಭೂ ದಾಖಲೆಗಳ ತಿದ್ದುಪಡಿ ಹಾಗೂ ಜಮೀನು ಪೋಡಿ ಮಾಡಿಕೊಡಲು 50 ಲಕ್ಷ ರೂ. ಲಂಚ ಸ್ವೀಕರಿಸುತ್ತಿದ್ದ ಧಾರವಾಡ ತಹಶೀಲ್ದಾರ್ ಸಚಿದಾನಂದ ಕುಚನೂರ್ ಅವರನ್ನು ಲೋಕಾಯುಕ್ತ ಅಧಿಕಾರಿಗಳು ಕಳೆದ ರಾತ್ರಿ ರೆಡ್‌ಹ್ಯಾಂಡ್ ಆಗಿ ಬಂಧಿಸಿದ್ದಾರೆ.

ಧಾರವಾಡ ತಾಲ್ಲೂಕಿನ ಯಾರಿಕೊಪ್ಪದಲ್ಲಿ ಸುಮಾರು 33 ಎಕರೆ ಜಮೀನು ಖರೀದಿಸಿದ್ದ ಡೆವಲಪರ್‌ರೊಬ್ಬರು, ಭೂಮಿಯ ಸಾಗುವಳಿ ಮತ್ತು ಖರಾಬ್ ಭಾಗಗಳ ದಾಖಲೆಗಳನ್ನು ತಿದ್ದುಪಡಿ ಮಾಡಿಸಿಕೊಳ್ಳಲು ಅರ್ಜಿ ಸಲ್ಲಿಸಿದ್ದರು. ಈ ಕಾರ್ಯಕ್ಕಾಗಿ ತಹಶೀಲ್ದಾರ್ ಒಂದು ಎಕರೆ ಜಮೀನು ಹಾಗೂ 50 ಲಕ್ಷ ರೂ. ನಗದು ನೀಡುವಂತೆ ಬೇಡಿಕೆ ಇಟ್ಟಿದ್ದರು ಎಂದು ಲೋಕಾಯುಕ್ತ ಎಸ್‌ಪಿ ಸಿದ್ದಲಿಂಗಪ್ಪ ತಿಳಿಸಿದ್ದಾರೆ.

ದೂರುದಾರರು ನಿನ್ನೆ ಮಧ್ಯಾಹ್ನ ಲೋಕಾಯುಕ್ತಕ್ಕೆ ದೂರು ನೀಡಿದ ಬಳಿಕ ಪ್ರಕರಣ ದಾಖಲಿಸಿ ಬಲೆ ಬೀಸಲಾಗಿತ್ತು. ಕೆಸಿಡಿ ಮೈದಾನದ ಬಳಿ ಹಣ ಪಡೆಯುವುದಾಗಿ ತಹಶೀಲ್ದಾರ್ ದೂರುದಾರರಿಗೆ ತಿಳಿಸಿದ್ದರು. ಕೆಂಪು ಬಣ್ಣದ ಚೀಲದಲ್ಲಿದ್ದ 50 ಲಕ್ಷ ರೂ.ಗಳನ್ನು ದೂರುದಾರರು ನೀಡಿದ ಬಳಿಕ, ಕುಚನೂರ್ ಅದನ್ನು ತಮ್ಮ ಚೀಲಕ್ಕೆ ಹಾಕಿಕೊಂಡಿದ್ದಾರೆ. ಈ ವೇಳೆ ಕಾರ್ಯಾಚರಣೆಯ ಭಾಗವಾಗಿ ಲೋಕಾಯುಕ್ತ ಅಧಿಕಾರಿಗಳು ಅವರನ್ನು ವಶಕ್ಕೆ ಪಡೆದಿದ್ದಾರೆ.

ಹಿಂದಿನ ಪೋಡಿ ರದ್ದುಪಡಿಸಿ ಹೊಸದಾಗಿ ಪೋಡಿ ನಡೆಸುವಂತೆ ಜಂಟಿ ಭೂದಾಖಲೆ ನಿರ್ದೇಶಕರು ಆದೇಶಿಸಿದ್ದರು. ಬಳಿಕ ಸಹಾಯಕ ಭೂದಾಖಲೆ ನಿರ್ದೇಶಕರು ಜಮೀನಿನ ದಾಖಲೆ ತಿದ್ದುಪಡಿ ಹಾಗೂ ಉಪವಿಭಜನೆಗೆ ತಹಶೀಲ್ದಾರ್‌ಗೆ ಪ್ರಸ್ತಾವನೆ ಸಲ್ಲಿಸಿದ್ದರು ಎಂದು ತಿಳಿದುಬಂದಿದೆ.

ಆರೋಪಿಯ ನಿವಾಸ ಸೇರಿದಂತೆ ಇತರ ಸ್ಥಳಗಳ ಪರಿಶೀಲನೆ ನಡೆಸಲಾಗಿದೆ. ಮುಂದಿನ ಕ್ರಮದ ಬಗ್ಗೆ ಬಳಿಕ ನಿರ್ಧರಿಸಲಾಗುವುದು ಮತ್ತು ತನಿಖೆ ಮುಂದುವರಿದಿದೆ ಎಂದು ಲೋಕಾಯುಕ್ತ ಅಧಿಕಾರಿಗಳು ತಿಳಿಸಿದ್ದಾರೆ.

ಜಗಳೂರು ಕೆರೆ ಅಭಿವೃದ್ಧಿಗೆ ಹೊಸ ಸ್ಪರ್ಶ: ಬೋಟಿಂಗ್ ವ್ಯವಸ್ಥೆ ಕಲ್ಪಿಸುವ ಭರವಸೆ

ಪ್ರವಾಸಿ ತಾಣವಾಗಿ ಅಭಿವೃದ್ಧಿಗೆ ಕ್ರಮ: ಶಾಸಕ ದೇವೇಂದ್ರಪ್ಪ

"ಮುಂಜಾನೆಯ ಮೆರಗು"

ಜಗಳೂರು, ಸೆ.17– ಪಟ್ಟಣದ ಕೆರೆ ಅಭಿವೃದ್ಧಿ ಕಾಮಗಾರಿಯನ್ನು ಶಾಸಕ ಬಿ. ದೇವೇಂದ್ರಪ್ಪ ಅವರು ಬುಧವಾರ ವೀಕ್ಷಿಸಿ, ಕಾಮಗಾರಿಯ ಪ್ರಗತಿ ಹಾಗೂ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಯೋಜನೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ನಂತರ ಮಾತನಾಡಿದ ಶಾಸಕ ಬಿ. ದೇವೇಂದ್ರಪ್ಪ, ಜಗಳೂರು ಪಟ್ಟಣದ ಕೆರೆಯನ್ನು ಸುಂದರ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಸುಮಾರು 9 ಕೋಟಿ ವೆಚ್ಚದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕೆರೆ ಸುತ್ತಲೂ ಸುಸಜ್ಜಿತ ರಸ್ತೆ, ವಾಯುವಿಹಾರಿಗಳಿಗೆ ಅನುಕೂಲವಾಗುವ ವಾಕ್‌ಪಾತ್, ಆಕರ್ಷಕ ಲೈಟಿಂಗ್ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗುವುದು. ಕೆರೆಯ ಮುಖ್ಯ ಪ್ರವೇಶದ್ವಾರದ ಬಳಿ ವಾಹನಗಳ ನಿಲುಗಡೆಗೆ ಸೂಕ್ತ ಪಾರ್ಕಿಂಗ್ ವ್ಯವಸ್ಥೆ ನಿರ್ಮಿಸಲಾಗುವುದು ಎಂದರು.

ಕೆರೆಯ ಮುಂಭಾಗದಲ್ಲಿ ಬುದ್ಧ, ಬಸವ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗಳನ್ನು ನಿರ್ಮಿಸುವ ಮೂಲಕ ಸಾಮಾಜಿಕ ಸಂದೇಶ ಸಾರುವ ಸ್ಥಳವನ್ನಾಗಿ ರೂಪಿಸಲಾಗುವುದು. ಪಟ್ಟಣದ ಜನರು ಬೆಳಗ್ಗೆ ಹಾಗೂ ಸಂಜೆ ವಾಯುವಿಹಾರ ನಡೆಸಲು ಅನುಕೂಲವಾಗುವಂತೆ ವಾಕ್‌ಪಾತ್ ನಿರ್ಮಿಸಲಾಗುವುದು ಎಂದು ಹೇಳಿದರು.

ಇದಲ್ಲದೆ ಕೆರೆಗೆ ಆಗಮಿಸುವ ಪ್ರವಾಸಿಗರು ಹಾಗೂ ಸಾರ್ವಜನಿಕರಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಮೋಟಾರ್ ಬೋಟಿಂಗ್ ವ್ಯವಸ್ಥೆ ಕಲ್ಪಿಸುವ ಉದ್ದೇಶವಿದೆ. ಇದರಿಂದ ಪಟ್ಟಣದ ಜನರಿಗೆ ಮನರಂಜನೆ ಹಾಗೂ ವಾಯುವಿಹಾರಕ್ಕೆ ಉತ್ತಮ ಸ್ಥಳ ದೊರೆಯುವುದರ ಜತೆಗೆ ಜಗಳೂರಿನ ಕೆರೆ ಪ್ರವಾಸಿ ಆಕರ್ಷಣೆಯಾಗಿ ಬೆಳೆಯಲು ಸಹಕಾರಿಯಾಗಲಿದೆ ಎಂದು ಶಾಸಕ ದೇವೇಂದ್ರಪ್ಪ ಹೇಳಿದರು.



ಈ ಸಂದರ್ಭದಲ್ಲಿ ಮುಖಂಡರಾದ ಸಾಹಿತಿ ಎನ್.ಟಿ. ಎರ್ರಿಸ್ವಾಮಿ, ನಿವೃತ್ತ ಕೆಎಸ್‌ಆರ್‌ಟಿಸಿ ಅಧಿಕಾರಿ ನಿಂಗಪ್ಪ, ಹನುಮಂತಪ್ಪ, ತಿಮ್ಮಣ್ಣ, ಶೆಟ್ಟಿನಾಯ್ಕ, ತಿಪ್ಪೇಸ್ವಾಮಿ, ಲಿಂಗಣ್ಣನಹಳ್ಳಿ ಅಜ್ಜಯ್ಯ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ 10 ಹೊಸ ಘೋಷಣೆ

"ಮುಂಜಾನೆಯ ಮೆರಗು"



ಕಲಬುರಗಿ, ಸೆ.17– ಕಲ್ಯಾಣ ಕರ್ನಾಟಕ ಭಾಗದಲ್ಲಿ ಐಟಿ ಪಾರ್ಕ್ ಸ್ಥಾಪನೆ ಸೇರಿದಂತೆ 10 ಮಹತ್ವದ ಯೋಜನೆಗಳನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದು ಘೋಷಿಸಿದ್ದಾರೆ. ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಕಲಬುರಗಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮುಖ್ಯಮಂತ್ರಿಯವರು, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕೈಗಾರಿಕಾ ಬೆಳವಣಿಗೆ ಹಾಗೂ ಹೂಡಿಕೆಗೆ ವೇಗ ನೀಡಲು ಕಲ್ಯಾಣ ಕರ್ನಾಟಕ ಎಕಾನಮಿ ಮಿಷನ್ ಸ್ಥಾಪಿಸಲಾಗುವುದು. ಸೆಕ್ಷನ್ 8 ಕಂಪನಿಯಾಗಿ ರೂಪುಗೊಳ್ಳಲಿರುವ ಈ ಮಿಷನ್ ಮೂಲಕ ದೊಡ್ಡ ಪ್ರಮಾಣದ ಹೂಡಿಕೆಗಳನ್ನು ಆಕರ್ಷಿಸಿ, ಹೊಸ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುವ ಗುರಿ ಹೊಂದಲಾಗಿದೆ ಎಂದರು.

ರೈತರ ಆದಾಯ ಹೆಚ್ಚಿಸುವ ಉದ್ದೇಶದಿಂದ ಬಯೋ ಎಕಾನಮಿ ಮಿಷನ್ ಸ್ಥಾಪಿಸಲಾಗುವುದು. ತೊಗರಿ ಬೇಳೆ, ಕಮಲಾಪುರ ಬಾಳೆಹಣ್ಣು, ಒಣದ್ರಾಕ್ಷಿ ಹಾಗೂ ಸಿರಿಧಾನ್ಯ ಸೇರಿದಂತೆ ಕಲ್ಯಾಣ ಕರ್ನಾಟಕದ ಪ್ರಮುಖ ಕೃಷಿ ಉತ್ಪನ್ನಗಳ ಸಂಸ್ಕರಣೆ ಮತ್ತು ಮೌಲ್ಯವರ್ಧನೆಗೆ ಆದ್ಯತೆ ನೀಡಲಾಗುವುದು.

ಕಲ್ಯಾಣ ಕರ್ನಾಟಕದಲ್ಲಿ ರಕ್ತಹೀನತೆ ಸಮಸ್ಯೆ ನಿವಾರಣೆಗೆ ಮುಂದಿನ ಎರಡು ವರ್ಷಗಳ ಕಾಲ ವಿಶೇಷ ಅಭಿಯಾನ ನಡೆಸಲಾಗುವುದು. ತಪಾಸಣೆ, ತಡೆಗಟ್ಟುವಿಕೆ ಹಾಗೂ ಚಿಕಿತ್ಸೆಗೆ ಒತ್ತು ನೀಡಲಾಗಿದ್ದು, ಗರ್ಭಿಣಿಯರು, ಹದಿಹರೆಯದವರು ಮತ್ತು ಹಾಲುಣಿಸುವ ತಾಯಂದಿರಿಗೆ ವಿಶೇಷ ಗಮನ ನೀಡಲಾಗುವುದು.

ವೇಗವಾಗಿ ಬೆಳೆಯುತ್ತಿರುವ ಕಲಬುರಗಿ ನಗರದ ಸಂಚಾರ ವ್ಯವಸ್ಥೆಯನ್ನು ಸುಧಾರಿಸಲು ಸೇಡಂ ರಸ್ತೆಯ ರಿಂಗ್ ರೋಡ್‌ನಲ್ಲಿ ಮೇಲ್ಸೇತುವೆ ನಿರ್ಮಿಸಲು ಉದ್ದೇಶಿಸಲಾಗಿದೆ. ಹೊಸ ಪೆರಿಫೆರಲ್ ರಿಂಗ್ ರೋಡ್‌ಗೂ ಯೋಜನೆ ರೂಪಿಸಲಾಗುತ್ತಿದ್ದು, ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ. ಇದರ ಜೊತೆಗೆ 30 ಕೋಟಿ ವೆಚ್ಚದಲ್ಲಿ ಹೊಸ ಕೆರೆ ಹಾಗೂ ಮನರಂಜನಾ ಉದ್ಯಾನವನ್ನು ಅಭಿವೃದ್ಧಿಪಡಿಸಿ, ನಗರದ ಪ್ರಮುಖ ಹಸಿರು ಮತ್ತು ಸಾರ್ವಜನಿಕ ವಿಹಾರ ತಾಣವನ್ನಾಗಿ ರೂಪಿಸಲಾಗುವುದು.

ಕಲಬುರಗಿ ಜಿಲ್ಲೆಯಲ್ಲಿ ನಿವೇಶನರಹಿತ ಕುಟುಂಬಗಳಿಗೆ 50,000 ವಸತಿ ನಿವೇಶನಗಳನ್ನು ಅಭಿವೃದ್ಧಿಪಡಿಸುವುದಾಗಿ ಘೋಷಿಸಲಾಗಿದೆ. ಎಲ್ಲರನ್ನೂ ಒಳಗೊಂಡ ಸಮಗ್ರ ಅಭಿವೃದ್ಧಿಯ ಭಾಗವಾಗಿ ಈ ಯೋಜನೆ ಕೈಗೊಳ್ಳಲಾಗುವುದು. ಕಲಬುರಗಿಯಲ್ಲಿ 30 ಎಕರೆ ಪ್ರದೇಶದಲ್ಲಿ ಐಟಿ ಪಾರ್ಕ್ ಅಭಿವೃದ್ಧಿಪಡಿಸಲಾಗುವುದು. ಬೆಂಗಳೂರಿನಾಚೆಗೂ ಐಟಿ ಮತ್ತು ನಾವೀನ್ಯತಾ ಕ್ಷೇತ್ರದ ಬೆಳವಣಿಗೆಯನ್ನು ವಿಸ್ತರಿಸುವ ಉದ್ದೇಶದಿಂದ ಈ ಯೋಜನೆ ರೂಪಿಸಲಾಗಿದೆ.

ಇದರ ಜೊತೆಗೆ ನಾವೀನ್ಯತೆ, ನವೋದ್ಯಮ ಹಾಗೂ ಯುವ ಉದ್ಯಮಿಗಳನ್ನು ಉತ್ತೇಜಿಸಲು ಕಲಬುರಗಿ ಸಂಶೋಧನೆ, ಅನ್ವೇಷಣೆ ಹಾಗೂ ಯುವ ವೇಗವರ್ಧಕ ಕೆ ಆರ್ ಐ ವೈ ಎ ಸ್ಥಾಪಿಸಲಾಗುವುದು ಎಂದು ತಿಳಿಸಿದ್ದಾರೆ. ಸಾರ್ವಜನಿಕ ಸುರಕ್ಷತೆ, ಅಪರಾಧ ನಿಯಂತ್ರಣ ಹಾಗೂ ಸಂಚಾರ ನಿರ್ವಹಣೆಯನ್ನು ಬಲಪಡಿಸಲು ಕಲಬುರಗಿ ನಗರ ಮತ್ತು ತಾಲೂಕು ಕೇಂದ್ರಗಳಲ್ಲಿ ಎಐ ಆಧರಿತ ಸಿಸಿಟಿವಿ ಜಾಲ ಅಳವಡಿಸಲಾಗುವುದು.

ನಗರ ಸ್ಥಳೀಯ ಸಂಸ್ಥೆಗಳ ನಾಗರಿಕ ಸೇವೆಗಳ ಮೇಲ್ವಿಚಾರಣೆ ಹಾಗೂ ತ್ಯಾಜ್ಯ ನಿರ್ವಹಣೆಯಲ್ಲಿಯೂ ಈ ತಂತ್ರಜ್ಞಾನವನ್ನು ಬಳಸಿಕೊಳ್ಳಲು ಉದ್ದೇಶಿಸಲಾಗಿದೆ. ಕಲಬುರಗಿ ಕೋಟೆ, ಶರಣಬಸವೇಶ್ವರ ದೇವಸ್ಥಾನ, ಖ್ವಾಜಾ ಬಂದೇ ನವಾಜ್ ದರ್ಗಾ, ಬುದ್ಧ ವಿಹಾರ, ಮಳಖೇಡ, ಸನ್ನತಿ ಹಾಗೂ ಗಾಣಗಾಪುರವನ್ನು ಸಂಪರ್ಕಿಸುವ ಪುಣ್ಯ ಯಾತ್ರಾ ಸರ್ಕ್ಯೂಟ್ ಅಭಿವೃದ್ಧಿಪಡಿಸಲಾಗುವುದು.

ಕೆಕೆಆರ್‌ಡಿಬಿ ಅನುದಾನದ ಮೂಲಕ ಮಳಖೇಡ, ನಾಗಾವಿ, ಕಾಳಗಿ ಹಾಗೂ ಸನ್ನತಿಯ ಪಾರಂಪರಿಕ ತಾಣಗಳ ಪುನರಾಭಿವೃದ್ಧಿಗೂ ಕ್ರಮ ಕೈಗೊಳ್ಳಲಾಗುತ್ತಿದೆ. ಗಾಣಗಾಪುರವನ್ನು ಮೊದಲ ಹಂತದಲ್ಲಿ 50 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸುವ ಯೋಜನೆ ಇದೆ.ಬಸವಣ್ಣನವರ ತತ್ವಗಳು ಮತ್ತು ವಚನ ಪರಂಪರೆಯನ್ನು ಯುವ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಕಲಬುರಗಿಯಲ್ಲಿ ವಚನ ಮಂಟಪ ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

ಮುಂದಿನ ಎರಡು ವರ್ಷಗಳಲ್ಲಿ ಚಂದ್ರಶೇಖರ ಪಾಟೀಲ ಕ್ರೀಡಾಂಗಣವನ್ನು ಆಧುನಿಕ ಕ್ರೀಡಾ ಮೂಲಸೌಕರ್ಯದೊಂದಿಗೆ ಸಮಗ್ರವಾಗಿ ಪುನರಾಭಿವೃದ್ಧಿಪಡಿಸಲಾಗುವುದು.ಕಲ್ಯಾಣ ಕರ್ನಾಟಕದಾದ್ಯಂತ ಕ್ರಿಕೆಟ್ ಸೌಲಭ್ಯಗಳನ್ನು ವಿಸ್ತರಿಸಲು ಸರ್ಕಾರವು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ಜತೆ ಒಡಂಬಡಿಕೆ ಮಾಡಿಕೊಳ್ಳುವುದಾಗಿ ವಿವರಿಸಿದ್ದಾರೆ.

ಇದಲ್ಲದೆ, ಕಲಬುರಗಿ ತಾಲೂಕಿನ ಹಡಗಿಲ ಹಾರುತಿ ಗ್ರಾಮದಲ್ಲಿ ಸ್ಪೋರ್ಟ್ಸ್ ಸಿಟಿ ಸ್ಥಾಪಿಸಲು ಉದ್ದೇಶಿಸಲಾಗಿದ್ದು, ವಿವಿಧ ಕ್ರೀಡೆಗಳಿಗೆ ಅಂತಾರಾಷ್ಟ್ರೀಯ ಮಟ್ಟದ ಒಳಾಂಗಣ ಮತ್ತು ಹೊರಾಂಗಣ ಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು.ಕಲ್ಯಾಣ ಕರ್ನಾಟಕದ ಹಸಿರು ಹೊದಿಕೆಯನ್ನು ಹೆಚ್ಚಿಸುವ ಹಾಗೂ ಹವಾಮಾನ ಬದಲಾವಣೆಯ ಪರಿಣಾಮಗಳನ್ನು ಎದುರಿಸುವ ಸಾಮರ್ಥ್ಯವನ್ನು ಬಲಪಡಿಸುವ ಉದ್ದೇಶದಿಂದ ಮುಂದಿನ ಎರಡು ವರ್ಷಗಳಲ್ಲಿ ಕೋಟಿ ವೃಕ್ಷ ಅಭಿಯಾನ ಕೈಗೊಳ್ಳಲಾಗುವುದು.

ಈ ಅಭಿಯಾನದಡಿ ಕಲ್ಯಾಣ ಕರ್ನಾಟಕ ಪ್ರದೇಶದಾದ್ಯಂತ ಒಂದು ಕೋಟಿ ಗಿಡಗಳನ್ನು ನೆಟ್ಟು ಪೋಷಿಸುವ ಗುರಿ ಹೊಂದಲಾಗಿದೆ ಎಂದು ಹೇಳಿದ್ದಾರೆ. ಒಟ್ಟಾರೆ, ಕೈಗಾರಿಕೆ ಮತ್ತು ಹೂಡಿಕೆಯಿಂದ ಹಿಡಿದು ಕೃ

ಮನೆ–ಮನದಿಂದಲೇ ಆರಂಭವಾಗಲಿ ಸ್ವಚ್ಛತಾ ಅಭಿಯಾನ: ದೇವೇಂದ್ರಪ್ಪ ಕರೆ

"ಮುಂಜಾನೆಯ ಮೆರಗು"

ಜಗಳೂರು, ಸೆ.17– ಸ್ವಚ್ಛ ಹಾಗೂ ಆರೋಗ್ಯಕರ ಪರಿಸರ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕರು ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ಸ್ವಚ್ಛತಾ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಶಾಸಕ ಬಿ. ದೇವೇಂದ್ರಪ್ಪ ಕರೆ ನೀಡಿದರು.

ಪಟ್ಟಣದ ಶಾಸಕರ ನಿವಾಸದ ಆವರಣದಲ್ಲಿ ಪಟ್ಟಣ ಪಂಚಾಯಿತಿ ವತಿಯಿಂದ ಸೆ.17ರಿಂದ ಅ.2ರವರೆಗೆ ಹಮ್ಮಿಕೊಂಡಿರುವ 'ಸ್ವಚ್ಛತಾ ಹೀ ಸೇವೆ' ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮನೆ, ನೆರೆಹೊರೆ ಹಾಗೂ ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಸ್ವಚ್ಛತೆ ಕಾಪಾಡುವುದರಿಂದ ಉತ್ತಮ ಆರೋಗ್ಯ ಹಾಗೂ ಸುಂದರ ಪರಿಸರ ನಿರ್ಮಾಣ



ಸಾಧ್ಯ. ಮಹಾತ್ಮ ಗಾಂಧೀಜಿ ಅವರು ಸ್ವಚ್ಛತೆಗೆ ವಿಶೇಷ ಆದ್ಯತೆ ನೀಡಿದ್ದರು. ಅವರ ಸ್ವಚ್ಛತೆ ಮತ್ತು ಸೇವೆಯ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡು ಸಮಾಜದಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಸ್ವಚ್ಛತೆಯ ಮಹತ್ವ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಅಧಿಕಾರಿಗಳು ಹಾಗೂ ಸ್ಥಳೀಯ ಸಂಸ್ಥೆಗಳು ನಿರಂತರವಾಗಿ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಯುವಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಅಭಿಯಾನದಲ್ಲಿ ಭಾಗವಹಿಸಿ ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸುವ ಮೂಲಕ ಇತರರಿಗೆ ಮಾದರಿಯಾಗಬೇಕು ಎಂದು ಹೇಳಿದರು.

ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಸಿ. ಲೋಕ್ಯಾನಾಯ್ಕ ಮಾತನಾಡಿ, ಸಾರ್ವಜನಿಕರು ತಮ್ಮ ಮನೆಗಳಲ್ಲಿ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ಸಂಗ್ರಹಿಸಿ, ಪೌರಕಾರ್ಮಿಕರ ಕಸದ ವಾಹನಕ್ಕೆ ನೀಡಬೇಕು. ಎಲ್ಲೆಂದರಲ್ಲಿ ಕಸ ಎಸೆಯದೆ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಕಾಪಾಡಲು ಪ್ರತಿಯೊಬ್ಬರೂ ಸಹಕರಿಸಬೇಕು. ಸ್ವಚ್ಛ ಪರಿಸರದಿಂದ ಆರೋಗ್ಯಕರ ಹಾಗೂ ಉತ್ತಮ ಜೀವನ ಸಾಧ್ಯವಾಗಲಿದ್ದು, 'ಸ್ವಚ್ಛತಾ ಹೀ ಸೇವೆ' ಅಭಿಯಾನವನ್ನು ಯಶಸ್ವಿಗೊಳಿಸಲು ನಾಗರಿಕರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಆರೋಗ್ಯ ನಿರೀಕ್ಷಕ ಭರಮಪ್ಪ, ಪೌರಕಾರ್ಮಿಕರ ಸಂಘದ ಅಧ್ಯಕ್ಷ ಚಿನ್ನಪ್ಪ, ಸಿಬ್ಬಂದಿಗಳಾದ ಮಮತಾ, ನೇತ್ರಾವತಿ, ರಾಜು ಸೇರಿದಂತೆ ಪ.ಪಂ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

ವಿಶ್ವಕರ್ಮ ಜಯಂತಿ ಆಚರಣೆ ಕಾಯಕದ ಮಹತ್ವ ಸಾರಿದ ಗಣ್ಯರು

"ಮುಂಜಾನೆಯ ಮೆರಗು"

ಜಗಳೂರು ಸೆ, 17– ಪಟ್ಟಣದ ತಾಲೂಕು ಕಚೇರಿ ಆವರಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಗುರುವಾರ ವಿಶ್ವಕರ್ಮ ಜಯಂತಿಯನ್ನು ಶ್ರದ್ಧಾಭಕ್ತಿಯಿಂದ ಆಚರಿಸಲಾಯಿತು.



ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೆಂಚಪ್ಪ (ಇಒ) ಕಾಯಕ ಮತ್ತು ಕೌಶಲ್ಯಕ್ಕೆ ಸಮಾಜದಲ್ಲಿ ವಿಶೇಷ ಸ್ಥಾನವಿದೆ. ವಿಶ್ವಕರ್ಮ ಸಮುದಾಯವು ತಮ್ಮ ಸಾಂಪ್ರದಾಯಿಕ ಕಲೆ, ಕರಕುಶಲ ಹಾಗೂ ವೃತ್ತಿ ಕೌಶಲ್ಯದ ಮೂಲಕ ಸಮಾಜದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದೆ ಎಂದು ಹೇಳಿದರು.

ವಿಶ್ವಕರ್ಮ ಜಯಂತಿಯು ಕೇವಲ ಆಚರಣೆಗೆ ಸೀಮಿತವಾಗದೆ, ಕಾಯಕದ ಗೌರವ, ವೃತ್ತಿ ಕೌಶಲ್ಯ ಮತ್ತು ಪರಂಪರೆಯ ಸಂರಕ್ಷಣೆಯ ಬಗ್ಗೆ ಯುವಜನರಲ್ಲಿ ಅರಿವು ಮೂಡಿಸುವಂತಾಗಬೇಕು. ಆಧುನಿಕ ತಂತ್ರಜ್ಞಾನದೊಂದಿಗೆ ಸಾಂಪ್ರದಾಯಿಕ ಕಲೆ–ಕೌಶಲ್ಯಗಳನ್ನು ಬೆಳೆಸಿಕೊಳ್ಳುವ ಮೂಲಕ ಸಮುದಾಯದ ಆರ್ಥಿಕ ಪ್ರಗತಿಗೆ ಒತ್ತು ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಕಚೇರಿ ಹಾಗೂ ತಾಲೂಕು ಪಂಚಾಯಿತಿ ಸಿಬ್ಬಂದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ವಿಶ್ವಕರ್ಮ ಸಮುದಾಯದ ಮಹತ್ವ ಹಾಗೂ ಭಗವಾನ್ ವಿಶ್ವಕರ್ಮರ ಕೊಡುಗೆಯನ್ನು ಸ್ಮರಿಸಲಾಯಿತು.

ಕಾಯಕ, ಕೌಶಲ್ಯಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ: ತಹಶೀಲ್ದಾರ್ ಗುರುಬಸವರಾಜ್

ಶ್ರಮಕ್ಕೆ ಗೌರವ ನೀಡುವ ಮೂಲಕ ಸಮಾಜದ ಪ್ರಗತಿಗೆ ಕೈಜೋಡಿಸೋಣ

"ಮುಂಜಾನೆಯ ಮೆರಗು"

ಜಗಳೂರು, ಸೆ.17– ವಿಶ್ವಕರ್ಮ ಸಮುದಾಯವು ತನ್ನ ಅಪಾರ ಕಾಯಕ, ಕೌಶಲ್ಯ, ಕರಕುಶಲತೆ ಹಾಗೂ ಸೃಜನಶೀಲತೆಯ ಮೂಲಕ ಸಮಾಜದ ನಿರ್ಮಾಣ ಮತ್ತು ಅಭಿವೃದ್ಧಿಗೆ ಶತಮಾನಗಳಿಂದಲೂ ಮಹತ್ವದ ಕೊಡುಗೆ ನೀಡುತ್ತಾ ಬಂದಿದೆ ಎಂದು ತಹಶೀಲ್ದಾರ್ ಗುರುಬಸವರಾಜ್ ಹೇಳಿದರು.

ಪಟ್ಟಣದ ತಾಲೂಕು ಕಚೇರಿಯಲ್ಲಿ ಗುರುವಾರ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವಕರ್ಮ ಜಯಂತಿ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ವಿಶ್ವಕರ್ಮರನ್ನು ಸೃಷ್ಟಿ, ನಿರ್ಮಾಣ ಮತ್ತು ಕಲೆ–ಕೌಶಲ್ಯದ ಪ್ರತೀಕವಾಗಿ ಗೌರವಿಸಲಾಗುತ್ತದೆ. ಕಬ್ಬಿಣ, ಮರ, ಚಿನ್ನ, ಬೆಳ್ಳಿ ಸೇರಿದಂತೆ ವಿವಿಧ ವಸ್ತುಗಳನ್ನು ಬಳಸಿ ಉಪಯುಕ್ತ ಹಾಗೂ ಕಲಾತ್ಮಕ ವಸ್ತುಗಳನ್ನು ತಯಾರಿಸುವ ಕುಶಲಕರ್ಮಿಗಳ ಸೇವೆ ಸಮಾಜಕ್ಕೆ ಅತ್ಯಂತ ಅಗತ್ಯವಾಗಿದೆ. ಆಧುನಿಕ ತಂತ್ರಜ್ಞಾನ ಅಭಿವೃದ್ಧಿಯಾಗುತ್ತಿರುವ ಇಂದಿನ ಸಂದರ್ಭದಲ್ಲಿ ಸಾಂಪ್ರದಾಯಿಕ ಕಲೆ, ಕೌಶಲ್ಯ ಮತ್ತು ವೃತ್ತಿಗಳನ್ನು ಉಳಿಸಿ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.

ಕಾಯಕವೇ ಕೈಲಾಸ ಎಂಬ ಆಶಯದಂತೆ ಪ್ರತಿಯೊಂದು ವೃತ್ತಿಗೂ ತನ್ನದೇ ಆದ ಮಹತ್ವವಿದೆ. ಯಾವುದೇ ಕೆಲಸವನ್ನು ಕೀಳಾಗಿ ಕಾಣದೆ, ಶ್ರಮಪಟ್ಟು ದುಡಿಯುವ ಪ್ರತಿಯೊಬ್ಬರಿಗೂ ಗೌರವ ನೀಡುವ ಮನೋಭಾವ ಸಮಾಜದಲ್ಲಿ ಬೆಳೆಯಬೇಕು. ವಿಶ್ವಕರ್ಮ ಜಯಂತಿ ಆಚರಣೆಯು ಶ್ರಮದ ಗೌರವ ಹಾಗೂ ಕೌಶಲ್ಯಕ್ಕೆ ಮಾನ್ಯತೆ ನೀಡುವ ಸಂದೇಶವನ್ನು ಸಾರುತ್ತದೆ ಎಂದು ತಿಳಿಸಿದರು.

ವಿಶ್ವಕರ್ಮ ಸಮುದಾಯದ ಯುವಕರು ತಮ್ಮ ಸಾಂಪ್ರದಾಯಿಕ ಕೌಶಲ್ಯದ ಜೊತೆಗೆ ಆಧುನಿಕ ತಂತ್ರಜ್ಞಾನ ಹಾಗೂ ಹೊಸ ತರಬೇತಿಗಳನ್ನು ಅಳವಡಿಸಿಕೊಂಡು ಸ್ವಯಂ ಉದ್ಯೋಗ ಮತ್ತು ಉದ್ಯಮಶೀಲತೆಯತ್ತ ಹೆಜ್ಜೆ ಇಡಬೇಕು. ಸರ್ಕಾರದಿಂದ ದೊರೆಯುವ ವಿವಿಧ ಸೌಲಭ್ಯಗಳು, ತರಬೇತಿ ಹಾಗೂ ಸ್ವಯಂ ಉದ್ಯೋಗ ಯೋಜನೆಗಳ ಪ್ರಯೋಜನ ಪಡೆದುಕೊಂಡು ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು ಎಂದು ಸಲಹೆ ನೀಡಿದರು.



ವಿಶ್ವಕರ್ಮರ ಪರಂಪರೆಯ ಕಲೆ ಮತ್ತು ಕೌಶಲ್ಯಗಳು ಕೇವಲ ಒಂದು ಸಮುದಾಯದ ಆಸ್ತಿಯಲ್ಲ. ಅವು ನಮ್ಮ ನಾಡಿನ ಸಾಂಸ್ಕೃತಿಕ ಪರಂಪರೆಯ ಭಾಗವಾಗಿದ್ದು, ಮುಂದಿನ ಪೀಳಿಗೆಗೆ ಅವುಗಳನ್ನು ಪರಿಚಯಿಸಿ ಸಂರಕ್ಷಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಕೌಶಲ್ಯಕ್ಕೆ ಸಿಗಲಿ ಪ್ರೋತ್ಸಾಹ

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಸಾಂಪ್ರದಾಯಿಕ ವೃತ್ತಿಗಳನ್ನು ಮುಂದುವರಿಸುತ್ತಿರುವ ಕುಶಲಕರ್ಮಿಗಳಿಗೆ ಮಾರುಕಟ್ಟೆ, ತಾಂತ್ರಿಕ ತರಬೇತಿ ಹಾಗೂ ಆರ್ಥಿಕ ನೆರವು ದೊರೆತರೆ ಅವರು ಮತ್ತಷ್ಟು ಅಭಿವೃದ್ಧಿ ಸಾಧಿಸಲು ಸಾಧ್ಯ. ಯುವಜನತೆ ಕೌಶಲ್ಯಾಧಾರಿತ ಶಿಕ್ಷಣದತ್ತ ಹೆಚ್ಚಿನ ಆಸಕ್ತಿ ತೋರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಗ್ರೇಡ್–2 ತಹಶೀಲ್ದಾರ್ ಪಾಲಯ್ಯ, ಶಿರಸ್ತೇದಾರ್ ಬದರಿನಾಥ್, ಆಹಾರ ನಿರೀಕ್ಷಕ ಶಿವಪ್ರಕಾಶ್, ಪ.ಪಂ.ಸ. ನೇತ್ರಾವತಿ, ಸೀರಿನಾ ಸೇರಿದಂತೆ ತಾಲೂಕು ಕಚೇರಿ ಸಿಬ್ಬಂದಿ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಬಡ ವಿದ್ಯಾರ್ಥಿಗೆ 20 ಸಾವಿರ, ರೋಗಿಗೆ 10 ಸಾವಿರ ಸಹಾಯಹಸ್ತ ಚಾಚಿದ ಶಾಸಕ ದೇವೇಂದ್ರಪ್ಪ



"ಮುಂಜಾನೆಯ ಮೆರಗು"

ಜಗಳೂರು, ಸೆ.17– ಸಂಕಷ್ಟದಲ್ಲಿರುವವರ ಪಾಲಿಗೆ ನೆರವಿನ ಹಸ್ತ ಚಾಚುವ ಮೂಲಕ ಮಾನವೀಯತೆ ಮೆರೆಯುವ ಉದ್ದೇಶದಿಂದ ಜಾರಿಗೊಳಿಸಿರುವ 'ನೊಂದವರಿಗೆ ನೆರವು' ಕಾರ್ಯಕ್ರಮದಡಿ ತಾಲ್ಲೂಕಿನ ಕಲ್ಲದೇವರಪುರ ಗ್ರಾಮದ ಬಡ ವಿದ್ಯಾರ್ಥಿ ಹಾಗೂ ಅನಾರೋಗ್ಯಪೀಡಿತ ವ್ಯಕ್ತಿಗೆ ಶಾಸಕ ಬಿ. ದೇವೇಂದ್ರಪ್ಪ ಆರ್ಥಿಕ ನೆರವು ನೀಡಿದರು.

ಕಲ್ಲೇದೇವರಪುರ ಗ್ರಾಮದ ಇಂಜಿನಿಯರಿಂಗ್ ಪದವಿ ವ್ಯಾಸಂಗ ಮಾಡುತ್ತಿರುವ ಬಡ ವಿದ್ಯಾರ್ಥಿ ಶಶಾಂಕ್ ಅವರಿಗೆ 20 ಸಾವಿರ ಹಾಗೂ ಅನಾರೋಗ್ಯದಿಂದ ಬಳಲುತ್ತಿರುವ ಲೋಕೇಶ್ ಅವರಿಗೆ 10 ಸಾವಿರ ನೆರವು ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಬಿ. ದೇವೇಂದ್ರಪ್ಪ, ಕ್ಷೇತ್ರದಲ್ಲಿ ಆರ್ಥಿಕ ಸಂಕಷ್ಟದಿಂದ ಬಳಲುತ್ತಿರುವವರು, ಅನಾರೋಗ್ಯಪೀಡಿತರು, ಬಡ ವಿದ್ಯಾರ್ಥಿಗಳು, ನಿರ್ಗತಿಕರು ಹಾಗೂ ಅನಾಥರಿಗೆ ಸಾಧ್ಯವಾದಷ್ಟು ನೆರವು ಒದಗಿಸುವ ಉದ್ದೇಶದಿಂದ 'ನೊಂದವರಿಗೆ ನೆರವು' ಎಂಬ ವಿಶೇಷ ಕಾರ್ಯಕ್ರಮವನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

"ಸಮಾಜದಲ್ಲಿ ನೆರವು ಅಗತ್ಯವಿರುವವರು ಸಾಕಷ್ಟು ಮಂದಿ ಇದ್ದಾರೆ. ಅವರ ಕಷ್ಟಕ್ಕೆ ಸ್ಪಂದಿಸುವುದು ನಮ್ಮೆಲ್ಲರ ಸಾಮಾಜಿಕ ಹೊಣೆಗಾರಿಕೆ. ಉಳ್ಳವರಿಂದ ಸಂಗ್ರಹವಾಗುವ ದೇಣಿಗೆ ಹಣವನ್ನು ಸಮಿತಿಯ ಮೂಲಕ ಅರ್ಹ ಫಲಾನುಭವಿಗಳಿಗೆ ತಲುಪಿಸಲಾಗುತ್ತಿದೆ. ನೆರವು ಪಡೆಯುವ ಪ್ರತಿಯೊಬ್ಬರೂ ಅದನ್ನು ಸದುಪಯೋಗಪಡಿಸಿಕೊಂಡು ತಮ್ಮ ಬದುಕನ್ನು ಉತ್ತಮಪಡಿಸಿಕೊಳ್ಳಬೇಕು," ಎಂದು ಹೇಳಿದರು.

ವಿದ್ಯಾರ್ಥಿ ಶಶಾಂಕ್ ಅವರು ಆರ್ಥಿಕ ಸಂಕಷ್ಟದ ನಡುವೆಯೂ ಇಂಜಿನಿಯರಿಂಗ್ ಶಿಕ್ಷಣ ಮುಂದುವರಿಸುತ್ತಿದ್ದು, ಶಿಕ್ಷಣವೇ ಬದುಕಿನ ಬದಲಾವಣೆಗೆ ಪ್ರಮುಖ ಸಾಧನವಾಗಿರುವುದರಿಂದ ಯಾವುದೇ ಅಡೆತಡೆಗಳ ನಡುವೆಯೂ ವಿದ್ಯಾಭ್ಯಾಸ ಮುಂದುವರಿಸಿ ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಶಾಸಕ ದೇವೇಂದ್ರಪ್ಪ ಹುರಿದುಂಬಿಸಿದರು.

ಅನಾರೋಗ್ಯದಿಂದ ಬಳಲುತ್ತಿರುವ ಲೋಕೇಶ್ ಅವರ ಚಿಕಿತ್ಸೆಗೆ ನೆರವಾಗುವ ಉದ್ದೇಶದಿಂದ 10 ಸಾವಿರ ನೀಡಲಾಗಿದ್ದು, ಸಂಕಷ್ಟದಲ್ಲಿರುವ ಕುಟುಂಬಗಳಿಗೆ ಇಂತಹ ಸಣ್ಣ ನೆರವೂ ದೊಡ್ಡ ಆಸರೆಯಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಾಹಿತಿ ಹಾಗೂ 'ನೊಂದವರಿಗೆ ನೆರವು' ಸಮಿತಿಯ ಕಾರ್ಯದರ್ಶಿ ಎನ್.ಟಿ. ಎರ್ರಿಸ್ವಾಮಿ, ಮುಖಂಡರಾದ ಅಜ್ಜಯ್ಯ, ಹನುಮಂತಪ್ಪ, ಪ್ರಕಾಶರೆಡ್ಡಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಜಗಳೂರಿಗೆ ಬಾರದ ಬರದ ಪಟ್ಟಿಯ ಭಾಗ್ಯ!


ಜನ–ಜಾನುವಾರುಗಳ ಕುಡಿಯುವ ನೀರು, ಮೇವಿನ ಸಮಸ್ಯೆ ಉಲ್ಬಣ

"ಮುಂಜಾನೆಯ ಮೆರಗು"

ಜಗಳೂರು, ಸೆ.17– ದಾವಣಗೆರೆ ಜಿಲ್ಲೆಯಲ್ಲಿಯೇ ಅತಿಹಿಂದುಳಿದ ತಾಲೂಕುಗಳಲ್ಲಿ ಒಂದಾಗಿರುವ ಜಗಳೂರು ತಾಲೂಕನ್ನು ಎರಡನೇ ಪಟ್ಟಿಯಲ್ಲಿಯೂ ಬರಗಾಲ ಪೀಡಿತ ತಾಲೂಕುಗಳ ಪಟ್ಟಿಗೆ ಸೇರ್ಪಡೆ ಮಾಡದಿರುವುದಕ್ಕೆ ರೈತ ಸಂಘಟನೆಗಳು ಹಾಗೂ ಪ್ರಗತಿಪರ ಚಿಂತಕರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ತಾಲೂಕಿನಲ್ಲಿ ಮುಂಗಾರು ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಆಗದ ಪರಿಣಾಮ ಕೃಷಿ ಚಟುವಟಿಕೆಗಳು ತೀವ್ರವಾಗಿ ಹಿನ್ನಡೆ ಕಂಡಿವೆ. ಬಿತ್ತನೆ ಮಾಡಿದ ಬೆಳೆಗಳಿಗೂ ಮಳೆಯ ಕೊರತೆಯಿಂದ ಹಾನಿಯ ಆತಂಕ ಎದುರಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಬರಪೀಡಿತ ತಾಲೂಕುಗಳ ಪಟ್ಟಿಗೆ ಜಗಳೂರು ಸೇರ್ಪಡೆಯಾಗದಿರುವುದು ರೈತರಿಗೆ ಮತ್ತಷ್ಟು ಆಘಾತ ಉಂಟುಮಾಡಿದೆ ಎಂದು ಸಂಘಟನೆಗಳು ಆಕ್ರೋಶ ವ್ಯಕ್ತಪಡಿಸಿವೆ.

ಜಗಳೂರು ತಾಲೂಕು ಮಳೆಯಾಶ್ರಿತ ಕೃಷಿಯನ್ನೇ ಹೆಚ್ಚಾಗಿ ಅವಲಂಬಿಸಿರುವ ಪ್ರದೇಶವಾಗಿದ್ದು, ಮಳೆ ಕೈಕೊಟ್ಟರೆ ಕೃಷಿ ಮಾತ್ರವಲ್ಲದೆ ಗ್ರಾಮೀಣ ಆರ್ಥಿಕ ವ್ಯವಸ್ಥೆಯ ಮೇಲೆಯೂ ನೇರ



ಪರಿಣಾಮ ಬೀರುತ್ತದೆ. ಈಗಾಗಲೇ ಹಲವು ಗ್ರಾಮಗಳಲ್ಲಿ ಜನರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರು ಮತ್ತು ಮೇವಿನ ಸಮಸ್ಯೆ ಎದುರಾಗುವ ಆತಂಕ ಹೆಚ್ಚಾಗಿದೆ. ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸಿದರೆ ಗ್ರಾಮೀಣ ಜನರ ಬದುಕು ದುಸ್ತರವಾಗುವ ಸಾಧ್ಯತೆ ಇದೆ ಎಂದು ರೈತ ಮುಖಂಡರು ತಿಳಿಸಿದ್ದಾರೆ.

'ಮಲತಾಯಿ ಧೋರಣೆ' ಆರೋಪ

ಜಗಳೂರು ವಿಧಾನಸಭಾ ಕ್ಷೇತ್ರದ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಂಸದರು ನಿರ್ಲಕ್ಷ್ಯದ ಧೋರಣೆ ತೋರುತ್ತಿದ್ದಾರೆ ಎಂಬ ಆರೋಪವೂ ಸ್ಥಳೀಯವಾಗಿ ಕೇಳಿಬರುತ್ತಿದೆ. ಬರಪರಿಸ್ಥಿತಿಯ ತೀವ್ರತೆಯನ್ನು ಸರ್ಕಾರದ ಗಮನಕ್ಕೆ ತಂದು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡಿಸಲು ಜನಪ್ರತಿನಿಧಿಗಳು ಹೆಚ್ಚಿನ ಪ್ರಯತ್ನ ನಡೆಸಬೇಕಿತ್ತು. ಆದರೆ ಎರಡನೇ ಪಟ್ಟಿಯಲ್ಲೂ ತಾಲೂಕು ಹೊರಗುಳಿದಿರುವುದು ರೈತರಲ್ಲಿ ಅಸಮಾಧಾನಕ್ಕೆ ಕಾರಣವಾಗಿದೆ ಎಂದು ಪ್ರಗತಿಪರ ಚಿಂತಕರು ದೂರಿದ್ದಾರೆ.

ತಾಲೂಕಿನ ವಾಸ್ತವ ಪರಿಸ್ಥಿತಿಯನ್ನು ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು. ರೈತರ ಬೆಳೆ ಪರಿಸ್ಥಿತಿ, ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಸೇರಿದಂತೆ ಗ್ರಾಮೀಣ ಭಾಗದ ಸಮಸ್ಯೆಗಳ ಕುರಿತು ಸಮಗ್ರ ವರದಿ ಪಡೆದು ಸರ್ಕಾರಕ್ಕೆ ಸಲ್ಲಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ರಾಜಕೀಯ ಭಿನ್ನಾಭಿಪ್ರಾಯ ಬದಿಗಿಟ್ಟು ಕ್ರಮಕ್ಕೆ ಒತ್ತಾಯ

ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕರ ನಡುವೆ ಇರುವ ರಾಜಕೀಯ ಭಿನ್ನಾಭಿಪ್ರಾಯ ಅಥವಾ ಮುನಿಸುಗಳನ್ನು ಬದಿಗಿಟ್ಟು ಜಗಳೂರು ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರ್ಪಡೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹವೂ ವ್ಯಕ್ತವಾಗಿದೆ.

ಬರಪೀಡಿತ ಪಟ್ಟಿಗೆ ಸೇರ್ಪಡೆಯಾದರೆ ರೈತರಿಗೆ ಬೆಳೆ ಪರಿಹಾರ, ಬೆಳೆ ವಿಮೆ ಸೇರಿದಂತೆ ಸರ್ಕಾರದ ವಿವಿಧ ಬರ ಪರಿಹಾರ ಕ್ರಮಗಳಡಿ ನೆರವು ದೊರೆಯುವ ಅವಕಾಶವಿದೆ. ಹೀಗಾಗಿ ತಾಲೂಕನ್ನು ಬರಪೀಡಿತ ಪಟ್ಟಿಗೆ ಸೇರಿಸುವ ವಿಚಾರದಲ್ಲಿ ವಿಳಂಬ ಮಾಡದೆ, ವಾಸ್ತವ ಪರಿಸ್ಥಿತಿಯನ್ನು ಪರಿಗಣಿಸಿ ಸರ್ಕಾರ ತುರ್ತು ನಿರ್ಧಾರ ಕೈಗೊಳ್ಳಬೇಕು ಎಂದು ರೈತ ಸಂಘಟನೆಗಳು ಒತ್ತಾಯಿಸಿವೆ.

ತಾಲೂಕಿನ ಬರ ಪರಿಸ್ಥಿತಿ ಕುರಿತು ಸರ್ಕಾರದ ಗಮನ ಸೆಳೆಯಲು ಮುಂದಿನ ದಿನಗಳಲ್ಲಿ ಹೋರಾಟವನ್ನು ತೀವ್ರಗೊಳಿಸುವ ಕುರಿತು ರೈತ ಸಂಘಟನೆಗಳು ಚಿಂತನೆ ನಡೆಸಿವೆ.

ಕಲ್ಲೇದೇವರಪುರ ಗ್ರಾಮದಲ್ಲಿ ಇಂದು ಭದ್ರಾಮೇಲ್ದಂಡೆ ನೀರಾವರಿ ಹೋರಾಟ ಸಮಿತಿಯಿಂದ ಸಭೆ

"ಮುಂಜಾನೆಯ ಮೆರಗು"

ಜಗಳೂರು, ಸೆ.17– ಭದ್ರಾ ಮೇಲ್ದಂಡೆ ನೀರಾವರಿ ಹೋರಾಟ ಸಮಿತಿ ವತಿಯಿಂದ ಇಂದು ಸಭೆಯನ್ನು ಕರೆಯಲಾಗಿದ್ದು, ಸಭೆಗೆ ತಾಲೂಕಿನ ರೈತರು, ಸಂಘಟನೆಗಳ ಹೆಚ್ಚಿನ ಸಂಖ್ಯೆಯಲ್ಲಿ



ಭಾಗವಹಿಸಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ತಾಲೂಕು ಅಧ್ಯಕ್